# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01 | ಸಂಚಿಕೆ – 208 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 05–03–2024 ಮಂಗಳವಾರ | ಪುಟ: 4 | ಬೆಲೆ : ರೂ.2–00 |
|---|---|---|---|---|---|---|
| Volume - 01 | Issue - 208 | Title- Code: KARKAN 28269 | Chitradurga | Date: 05-03-2024 Tuesday | Page: 4 | Price: Rs. 2-00 |



**ಒಳಪುಟದ ಸುದ್ದಿಗಳು**

ಬಾಕಿ ಉಳಿದ ಸುಮಾರು 3485 ಅರ್ಜಿ ವಿಲೇವಾರಿಗೆ ಕ್ರಮ: ಶಾಸಕ ರಘುಮೂರ್ತಿ **2**

ಚುನಾವಣಾ ಅಕ್ರಮಗಳ ತಡೆಗಾಗಿ ಆಂಧ್ರ ಅಧಿಕಾರಿಗಳ ಸಹಕಾರ ಕೋರಿಕೆ: ಡಿಸಿ **3**

ಚುನಾವಣಾ ಪ್ರಚಾರ ಸಾಮಗ್ರಿಗಳ ಮುದ್ರಣ ಕಾರ್ಯದ ಮಾಹಿತಿ ನೀಡುವುದು ಕಡ್ಡಾಯ **4**



ಸುದ್ದಿ, ಜಾಹಿರಾತಿಗೆ 9686622252


# ಚಳ್ಳಕೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಸರ್ವಾಂಗೀಣ ಅಭಿವೃದ್ದಿಗೆ ಸರ್ಕಾರದ ಸಂಕಲ್ಪ: ರಘುಮೂರ್ತಿ

## 2.50 ಕೋಟಿ ರು. ವೆಚ್ಚದ ವಾಣಿಜ್ಯ ಮಳಿಗೆ ನಿರ್ಮಾಣದ ಭೂಮಿಪೂಜೆ: ಶಾಸಕ

» **ಚಳ್ಳಕೆರೆ**

ಚಳ್ಳಕೆರೆ ಕೃಷಿಉತ್ಪನ್ನ ಮಾರುಕಟ್ಟೆ ನೆರೆಯ ಆಂಧ್ರಪ್ರದೇಶದಿಂದಲೂ ಸಹ ವ್ಯವಹಾರ ಹೊಂದಿದ್ದು, ರಾಜ್ಯದಲ್ಲೇ ಉತ್ತಮ ಮಾರುಕಟ್ಟೆಯಾಗಿ ಪರಿವರ್ತನೆಯಾಗಿದೆ. ರಾಜ್ಯದಲ್ಲಿ ಅತಿಹೆಚ್ಚು ವ್ಯವಹಾರ ಹೊಂದಿರುವ ಉತ್ತಮ ಲಾಭದತ್ತಮುನ್ನಡೆದಿರುವ, ರಾಜ್ಯದ ಎರಡನೇ ಮಾರುಕಟ್ಟೆ ಎಂಬ ಹೆಸರು ಗಳಿಸಿರುವ ಈ ಮಾರುಕಟ್ಟೆ ಹೊರಹೊಮ್ಮಿದೆ. ಇನ್ನೂ ಹೆಚ್ಚಿನ ಅಭಿವೃದ್ಧಿ ಹೊಂದಲು ಇಲ್ಲಿಗೆ ಬರುವ ಖರೀದಿದಾರರು, ಮಾರುಕಟ್ಟೆದಾರರು, ರೈತರಿಗೆ ಸೂಕ್ತ ಸೌಲಭ್ಯ ಕಲ್ಪಿಸಲು ಸುಮಾರು 2.50 ಕೋಟಿ ವೆಚ್ಚದಲ್ಲಿ ವಾಣಿಜ್ಯ ಮಳಿಗೆಗಳನ್ನು ನಿರ್ಮಾಣ ಮಾಡಲಾಗುತ್ತದೆ ಎಂದು ರಾಜ್ಯ ಸಣ್ಣಕೈಗಾರಿಕೆಗಳ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಮಾರುಕಟ್ಟೆ ಆವರಣದಲ್ಲಿ ಕೃಷಿ ಮಾರಾಟ ಇಲಾಖೆ, ಕೃಷಿ ಉತ್ಪನ್ನ ಮಾರಾಟ ಸಮಿತಿ 2022–23ನೇ ಸಾಲಿನ ಕ್ರಿಯಾಯೋಜನೆಯಡಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಸುಮಾರು 2.50 ಕೋಟಿ ವೆಚ್ಚದ ವಾಣಿಜ್ಯಮಳಿಗೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.



ಚಳ್ಳಕೆರೆ ನಗರದ ಮಾರುಕಟ್ಟೆ ಆವರಣದಲ್ಲಿ ಕೃಷಿ ಉತ್ಪನ್ನ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಸುಮಾರು 2.50 ಕೋಟಿ ವೆಚ್ಚದ ವಾಣಿಜ್ಯಮಳಿಗೆ ನಿರ್ಮಾಣ ಕಾಮಗಾರಿಗೆ ಶಾಸಕ ಟಿ.ರಘುಮೂರ್ತಿ ಭೂಮಿಪೂಜೆ ನೆರವೇರಿಸಿದರು.

ಕಳೆದ ಕೆಲವು ದಿನಗಳ ಹಿಂದೆ ಹುಣಸೆಹಣ್ಣು ಮಾರಾಟದ ವಿಚಾರದಲ್ಲಿ ರೈತರು ಮತ್ತು ವರ್ತಕರ ನಡುವೆ ಅಸಮದಾನ ಹೆಚ್ಚಾಗಿ ಮಾರುಕಟ್ಟೆ ವ್ಯವಹಾರಕ್ಕೆ ಅಡಿಯಾಗಿತ್ತು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಯಾವುದೇ ಕಾರಣಕ್ಕೂರೈತರಿಗೆ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸಬೇಕೆಂದು ಸೂಚನೆ ನೀಡಿದ್ದು, ಈಗ ಎಲ್ಲವೂ ಮಾಮೂಲಿಯಂತೆ ನಡೆಯುತ್ತಿದೆ ಎಂದರು. ಆಡಳಿತಾಧಿಕಾರಿ ಶ್ಯಾಮ್, ಕಾರ್ಯದರ್ಶಿ ಸುರೇಶ್, ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ್, ಉಪಾಧ್ಯಕ್ಷ ಡಿ.ಎಂ.ತಿಪ್ಪೇಸ್ವಾಮಿ, ಕಾರ್ಯದರ್ಶಿ ವೆಂಕಟನಾಗರಾಜು, ಮಾಜಿ ಕಾರ್ಯದರ್ಶಿ ಸುರೇಶ್, ರೆಡ್ಡಿಹಳ್ಳಿ ಶಿವಣ್ಣ, ಸತೀಶ್, ಈಶ್ವರಪ್ಪ, ಪ್ರಕಾಶ್, ವೃಷಬೇಂದ್ರಪ್ಪ, ಮಾರುಕಟ್ಟೆ ಅಧಿಕಾರಿಗಳು ಗೌಸ್‌ಪೀರ್, ಭಾಷ, ಗಂಗಪ್ಪ, ನಗರಸಭಾ ಸದಸ್ಯೆ ಎಂ.ಸಾವಿತ್ರಮ್ಮ, ತಾಲ್ಲೂಕು ಮಾಜಿಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ, ಪಾತಲಿಂಗಪ್ಪ, ಟಿಎಟಿ ಪ್ರಭುದೇವ್, ಸಿ.ಟಿ.ಶ್ರೀನಿವಾಸ್, ಕೋದಂಡರಾಮ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶುಭ ನುಡಿ

ನನಗೆ ಯಾರು ಅವಶ್ಯಕತೆ ಇಲ್ಲ
ಎನ್ನುವ ಅಭಿಮಾನ ಒಳ್ಳೆಯದಲ್ಲ.
ಹಾಗೆ ಎಲ್ಲರಿಗೂ ನನ್ನ ಅವಶ್ಯಕತೆ ಇದೆ
ಎನ್ನುವ ಭ್ರಮೆಯು ಒಳ್ಳೆಯದಲ್ಲ.

» ಶುಭೋದಯ

### ಮಕ್ಕಳ ಎದುರಿನಲ್ಲೇ ನೇಣುಹಾಕಿಕೊಂಡು ಹೆಣವಾದ ಹೆತ್ತ ಅಪ್ಪ

» **ಚಳ್ಳಕೆರೆ**

ಮಗಳ ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಚಿಂತೆಗೀಡಾದ ವ್ಯಕ್ತಿಯೊಬ್ಬ ಮನೆಯಲ್ಲಿ ಮಕ್ಕಳ ಎದುರಲ್ಲೇ ನೇಣುಹಾಕಿಕೊಂಡು ಮೃತಪಟ್ಟ ಘಟನೆ ದೇವರಮರಿಕುಂಟೆ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಈರಣ್ಣ(42) ಮೃತಪಟ್ಟ ವ್ಯಕ್ತಿಯಾಗಿದ್ದು, ಮಗಳು ಅಂಕಿತ, ಮಾನಸ, ಮಗ ಮಂಜುನಾಥ, ಪತ್ನಿ ಗೀತಮ್ಮರೊಂದಿಗೆ ಜೀವನ ಸಾಗಿಸುತ್ತಿದ್ದು, ಅಂಕಿತ ಆರೋಗ್ಯ ಸರಿಯಿಲ್ಲದ ಕಾರಣ ಮಂಗಳೂರು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದರೂ ಗುಣಮುಖ ಆಗಿರಲಿಲ್ಲ. ಈ ಹಿನ್ನೆಲೆಯಲ್ಲಿ ತೀರ್ವವಾಗಿ ಮನನೊಂದಿದ್ದ ಈರಣ್ಣ, ಮನೆಯಲ್ಲಿ ಯಾರೂ ಇಲ್ಲದ ಸಂದರ್ಭದಲ್ಲಿ ಮನೆಯ ಹಾಲ್‌ನಲ್ಲಿ ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ತಂದೆ ನೇಣು ಹಾಕಿಕೊಂಡ ಸಂದರ್ಭದಲ್ಲಿ ಮಕ್ಕಳು ಕಿರುಚಿಗೊಂಡಿದ್ದು, ನೆರೆಹೊರೆಯವರು ದಾವಿಸಿ ಬಂದು ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ, ಆಸ್ಪತ್ರೆಗೆ ಸಾಗಿಸುವ ಮುನ್ನವೇ ಮೃತಪಟ್ಟಿದ್ದ ಎನ್ನಲಾಗಿದೆ. ಪಿಎಸ್‌ಐ ಧರಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ಧಾರೆ.

### ವ್ಯವಹಾರದಲ್ಲಿ ನಷ್ಟ ಸಾಲ ತೀರಿಸಲಾಗದೆ ನೇಣಿಗೆ

» **ಚಳ್ಳಕೆರೆ**

ವ್ಯವಹಾರಗಳಲ್ಲಿ ಸಾಲಮಾಡಿ ಮನನೊಂದಿದ್ದ ವ್ಯಕ್ತಿಯೊಬ್ಬ ಮನೆಯಲ್ಲೇ ನೇಣುಹಾಕಿಕೊಂಡು ಮೃತಪಟ್ಟಿದ್ದಾನೆ. ತಾಲ್ಲೂಕಿನ ಸಿದ್ದಾಪುರದ ಕೆ.ಮಂಜುನಾಥ(41) ಮೃತಪಟ್ಟ ವ್ಯಕ್ತಿಯಾಗಿದ್ದು, ಈತ ಮುತ್ತಿಗೇರಹಳ್ಳಿ ಗ್ರಾಮದಲ್ಲಿ ದಿನಸಿ ಅಂಗಡಿ ನಡೆಸುತ್ತಿದ್ದ, ಸಾಲ ಹೆಚ್ಚಾದ ಹಿನ್ನೆಲೆಯಲ್ಲಿ ತನ್ನ ಹೆಂಡತಿ ತವರುಮನೆ ಸಿದ್ದಾಪುರಕ್ಕೆ ಆಗಮಿಸಿ ಅವರ ಜಮೀನಿನ ಹೊಂಗೆಮರಕ್ಕೆ ಸೋಮವಾರ ಮಧ್ಯಾಹ್ನ ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ಮೃತನ ಪತ್ನಿ ಶಶಿಕಲಾ ಪೊಲೀಸರಿಗೆ ದೂರು ನೀಡಿದ್ದು, ಎಎಸ್‌ಐ ಮುಸ್ಟೂರಪ್ಪ ಪ್ರಕರಣ ದಾಖಲಿಸಿದ್ಧಾರೆ.

### ಮಕ್ಕಳ ಪಾಲನಾ ಸಂಸ್ಥೆಗಳನ್ನು ನೊಂದಾಯಿಸಿಕೊಳ್ಳಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಸೆಕ್ಷನ್ 41ರಲ್ಲಿ ನೊಂದಣಿಯಾಗದೆ ಇರುವ ಮಕ್ಕಳ ಪಾಲನಾ ಸಂಸ್ಥೆಗಳನ್ನು ನೊಂದಾಯಿಸಬೇಕಾಗಿದೆ.

ಜಿಲ್ಲೆಯಲ್ಲಿ ಪಾಲನೆ, ಪೋಷಣೆ ಅವಶ್ಯಕತೆ ಇರುವ ಮಕ್ಕಳಿಗೆ ಪುನರ್ವಸತಿ ಕಲ್ಪಿಸಲು ಮಕ್ಕಳ ಪಾಲನಾ ಸಂಸ್ಥೆಗಳನ್ನು ನಡೆಸುತ್ತಿದ್ದಲ್ಲಿ, ಅಂತಹ ಸಂಸ್ಥೆಗಳನ್ನು ನೋಂದಾಯಿಸಲು ಚಿತ್ರದುರ್ಗ ನಗರದ ಸ್ಟೇಡಿಯಂ ಹತ್ತಿರದ ಜಿಲ್ಲಾ ಭವನ ಆವರಣದಲ್ಲಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಚೇರಿ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಅವರ ದೂರವಾಣಿ ಸಂಖ್ಯೆ 9741812148 ಮತ್ತು ಮಕ್ಕಳ ರಕ್ಷಣಾಧಿಕಾರಿ ಎನ್.ಕೆ.ಹೆಚ್.ಸ್ವಾಮಿ ದೂರವಾಣಿ ಸಂಖ್ಯೆ ಅವರನ್ನು 6360846383 ಗೆ ಸಂಪರ್ಕಿಸಲು ಕೋರಿದೆ.

ಒಂದು ವೇಳೆ ನೊಂದಾಯಿಸಿಕೊಳ್ಳದ ಅನಧಿಕೃತ ಮಕ್ಕಳ ಪಾಲನಾ ಸಂಸ್ಥೆಗಳ ವಿರುದ್ಧ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಸೆಕ್ಷನ್ 42ರನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ. ಸವಿತಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶೇಷ ಅನುದಾನದಡಿ ಕಾಮಗಾರಿಗಳಿಗೆ ಭೂಮಿ ಪೂಜೆ ಸಲ್ಲಿಸಿದ: ಶಾಸಕ ಬಿ.ಜಿ.ಗೋವಿಂದಪ್ಪ

**ಹೊಸದುರ್ಗ:** ತಾಲ್ಲೂಕಿನ ಬಾಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನ 25.ಕೋಟಿ ರೂಪಾಯಿಗಳ ಅನುದಾನದಲ್ಲಿ 85 ಲಕ್ಷ.ರೂ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ, ಕರ್ನಾಟಕ ರಾಜ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಭೂಮಿ ಪೂಜೆ ನೆರವೇರಿಸಿದರು.ಬಾಗೂರಿನ ಶ್ರೀಮೈಲಾರಲಿಂಗೇಶ್ವರ ದೇವಾಲಯದ ಪ್ರಾರ್ಥನಾ ಮಂದಿರಕ್ಕೆ 15.ಲಕ್ಷರೂ, ಶ್ರೀ ಗುರುರೇವಣ ಸಿದ್ದೇಶ್ವರ ದೇವಸ್ಥಾನದ ಪ್ರಾರ್ಥನಾ ಮಂದಿರ ನಿರ್ಮಾಣಕ್ಕೆ 25.ಲಕ್ಷ ರೂ, ಶ್ರೀರಂಗಪುರ ಗ್ರಾಮದ ಭೂತಪ್ಪನ ದೇವಾಲಯದ ಪ್ರಾರ್ಥನಾ ಮಂದಿರಕ್ಕೆ 6.ಲಕ್ಷ ರೂ, ಬಾಗೂರಿನ ಪೋಲೀಸ ಸ್ಟೇಷನ್ ಮುಂಭಾಗದ ಸಿಸಿ ರಸ್ತೆಯ ನಿರ್ಮಾಣಕ್ಕೆ 15.ಲಕ್ಷ ರೂ, ಐಲಾಪುರದ ಶಾಲೆಯ ಮುಂಭಾಗದ ಚರಂಡಿಯ ನಿರ್ಮಾಣಕ್ಕೆ 15.ಲಕ್ಷ ರೂ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.



## ದ್ವಿತೀಯ ಪಿಯು ಪರೀಕ್ಷೆ: 105 ವಿದ್ಯಾರ್ಥಿಗಳು ಗೈರು

**ಚಿತ್ರದುರ್ಗ:** ಮಾರ್ಚ್ 04 ರಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಗಣಿತ ವಿಷಯದ ಪರೀಕ್ಷೆಗೆ 94 ವಿದ್ಯಾರ್ಥಿಗಳು ಹಾಗೂ ಶಿಕ್ಷಣಶಾಸ್ತ್ರ ವಿಷಯದ ಪರೀಕ್ಷೆಗೆ 11 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 105 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಗಣಿತ ವಿಷಯದಲ್ಲಿ 6228 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 6134 ವಿದ್ಯಾರ್ಥಿಗಳು ಹಾಜರಾಗಿ, 94 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಶಿಕ್ಷಣಶಾಸ್ತ್ರ ವಿಷಯದಲ್ಲಿ 279 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 268 ವಿದ್ಯಾರ್ಥಿಗಳು ಹಾಜರಾಗಿ, 11 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ 24 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು. ಜಿಲ್ಲೆಯಲ್ಲಿ ಯಾವುದೇ ಡಿಬಾರ್ ಪ್ರಕರಣ ಇರುವುದಿಲ್ಲ. ಮಾರ್ಚ್ 05ರಂದು ರಾಜ್ಯಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರ ವಿಷಯದ ಪರೀಕ್ಷೆ ಇರುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಹೊಸದುರ್ಗ ಅರಣ್ಯ ಇಲಾಖೆ ಮುಂಭಾಗ ಉಪವಾಸ ಸತ್ಯಾಗ್ರಹ ನಡೆಸಿದ ಮಾಜಿ ಸಚಿವ ಗೂಳಿಹಟ್ಟಿ ಶೇಖರ್

# ಅಕ್ರಮ ಗಣಿಗಾರಿಕೆಗೆ ಬೆಂಬಲ: ಕ್ರಮ ತೆಗೆದುಕೊಳ್ಳಲು ಒತ್ತಾಯ

» **ಹೊಸದುರ್ಗ**

ತಾಲ್ಲೂಕಿನ ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ಪದೇ ಪದೇ ದೌರ್ಜನ್ಯ ಎಸಗಿರುವುದು ಹಾಗೂ ಡೀಮ್ಡ್ ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆಗೆ ಬೆಂಬಲ ನೀಡಿ ಮಂಜೂರು ಮಾಡಲು, ಶಿಫಾರಸ್ಸಿಗೆ ಅನುಕೂಲ ಮಾಡಿಕೊಟ್ಟಿರುವ ಹಿಂದಿನ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ಉಪ ಅರಣ್ಯಸಂರಕ್ಷಣಾಧಿಕಾರಿ, ಜಿಲ್ಲಾ ಹಾಗೂ ವಲಯ ಅರಣ್ಯಾಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸುವವರೆಗೂ ಒಂಟಿ ಅಮರಣ ಉಪವಾಸ ಸತ್ಯಾಗ್ರಹ ಮಾಡುವುದಾಗಿ ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಹೇಳಿದರು.

ಪಟ್ಟಣದ ಅರಣ್ಯ ಇಲಾಖೆ ಎದುರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಒಂಟಿ ಅಮರಣ ಉಪವಾಸ ಸತ್ಯಾಗ್ರಹ ಆರಂಭಿಸಿ ಅವರು ಮಾತನಾಡಿದರು. ತಾಲ್ಲೂಕಿನ ಗುಡ್ಡಗಾಡುಗಳಲ್ಲಿ ಬಿದ್ದಿರುವ ಕಲ್ಲುಗಳು ಮತ್ತು ಬೆಂಕಿಯಿಂದ ಸುಟ್ಟ ಸೈಜು ಕಲ್ಲು ಹಾಗೂ ಕಲ್ಲು ಒಡೆದು ವೃತ್ತಿ ಮಾಡುತ್ತಿರುವ ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ಅರಣ್ಯ ಇಲಾಖೆಯವರು ನಿರಂತರ ದೌರ್ಜನ್ಯ ಎಸಗುತ್ತಿದ್ದಾರೆ. ಕಲ್ಲು ಒಡೆಯುವವರ ಸಾಂಪ್ರದಾಯಿಕ ಜೀವನಕ್ಕೆ ತೊಂದರೆ ಮಾಡಬಾರದೆಂಬ ನಿಯಮವನ್ನು ಹೊಸದುರ್ಗದಲ್ಲಿ ಉಲ್ಲಂಘಿಸಲಾಗುತ್ತಿದೆ. ಈ ದೌರ್ಜನ್ಯ ಖಂಡಿಸಿ ಕಳೆದ 4 ತಿಂಗಳ ಹಿಂದಯೇ ಸತ್ಯಾಗ್ರಹ ಮಾಡಬೇಕಿತ್ತು, ಅಧಿಕಾರಿಗಳಿಗೆ ತಪ್ಪಿನ ಅರಿವಾಗಬಹುದು ಎಂಬ ಉದ್ದೇಶದಿಂದ ಕಾಲಾವಕಾಶ ನೀಡಿದ್ದು, ಯಾವುದೇ ಪ್ರಯೋಜನವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುವವರೆಗೂ ಅಮರಣ ಉಪವಾಸ ಸತ್ಯಾಗ್ರಹದಿಂದ ಮೇಲೆಳುವುದಿಲ್ಲ. ನಾನು ಒಂದು ಬಾರಿ ಹಠ ಹಿಡಿದು ಕುಳಿತರೆ, ಮೇಲೆ ಎದ್ದೇಳುವ ಮಾತೇ ಇಲ್ಲ. ಹಿಂದೆ ಸರಿದರೆ, ನನಗೆ ನಾನೇ ಅವಮಾನ ಮಾಡಿಕೊಂಡಂತೆ. ಇದನ್ನು( ಅರಣ್ಯ ಇಲಾಖೆಯ ಭೂಮಿ ಒತ್ತುವರಿ, ಅಕ್ರಮ ಗಣಿಗಾರಿಕೆ) ಕೆದಕುತ್ತಾ ಹೋದರೆ, ಇದರಲ್ಲಿ ದೊಡ್ಡ ದೊಡ್ಡವರ ಕೈಗಳೆ ಇವೆ. ಎಲ್ಲ ದಾಖಲೆಗಳನ್ನು ಸಂಗ್ರಹಿಸಿಕೊಂಡಿದ್ದು, ಲೋಕಾಯುಕ್ತರಿಗೆ ದೂರು ಕೊಡುವೆ. ಇದರಲ್ಲಿ ರಾಜಿಯಾಗುವ ಪ್ರಶ್ನೆಯೇ ಇಲ್ಲ. ತಪ್ಪಿತಸ್ಥ ಅಧಿಕಾರಿಯ ವಿರುದ್ಧ ಕ್ರಮ ತೆಗೆದುಕೊಳ್ಳಲು ತಡವೇಕೆ? ನಾನು ಮಂತ್ರಿಯಾಗಿದ್ದ ಸಂದರ್ಭದಲ್ಲಿ ತಪ್ಪಿತಸ್ಥ ಅಧಿಕಾರಿಗಳನ್ನು ಒಂದು ನಿಮಿಷದಲ್ಲಿಯೇ ಸಸ್ಪೆಂಡ್ ಮಾಡಿಸಿದ್ದೇನೆ. ಬಡ ರೈತರು ಮತ್ತು ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ದರ್ಪ ಮೆರೆದಿರುವ ಹೊಸದುರ್ಗ ಅರಣ್ಯ ವಲಯ ಅಧಿಕಾರಿ ಸಸ್ಪೆಂಡ್ ಆಗಬೇಕು. ಬಡವರಿಗೆ ನ್ಯಾಯ ಸಿಗುವವರೆಗೂ ಉಪವಾಸ ಸತ್ಯಗ್ರಹದಿಂದ ಮೇಲೇಳುವುದಿಲ್ಲ.

» **ಗೂಳಿಹಟ್ಟಿ ಡಿ.ಶೇಖರ್ ಮಾಜಿ ಶಾಸಕ**

ಸರ್ವೆ ನಂ 86, 87 ಮತ್ತು 88 ರ ಪ್ರದೇಶವನ್ನು ಡೀಮ್ಡ್ ಅರಣ್ಯ ಎಂದು ಘೋಷಿಸಲಾಗಿತ್ತು. 2008 ರಲ್ಲಿ ಹೊಸಹಳ್ಳಿ ಗ್ರಾಮದವರು ಕಲ್ಲು ಗಣಿಗಾರಿಕೆಗೆ ಅರ್ಜಿ ಹಾಕಿದರು. ಆದರೆ, ಕಂದಾಯ ಇಲಾಖೆ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಿ ಒಂದು ಅರ್ಜಿಯನ್ನು ಮಾತ್ರ (ಲಿಂಗಮೂರ್ತಿ ತಮ್ಮ ಸಿದ್ದಪ್ಪ) ಪುರಸ್ಕರಿಸಿತು. ಆಗ ಇವರು ಅರ್ಜಿ ಹಾಕಿದ ಸ್ಥಳ ಅರಣ್ಯ ಇಲಾಖೆ ವ್ಯಾಪ್ತಿಯಲಿಲ್ಲ ಎಂಬ ತಪ್ಪು ಮಾಹಿತಿಯನ್ನು ಇಲಾಖೆ, ಕಂದಾಯ ಇಲಾಖೆಗೆ ತಿಳಿಸಿತು, ಕೂಡಲೇ ಅವರು ಅರ್ಜಿ ಸ್ವೀಕರಿಸಿದರು. ನಂತರ ತಾಲ್ಲೂಕಿನ 4 ವ್ಯಕ್ತಿಗಳಿಗೆ (ಅನಂತ್, ದಳವಾಯಿ ವೆಂಕಟೇಶ್, ಯತೀಶ್, ಮಂಜಣ್ಣ) ತಲಾ 5 ಎಕರೆಗಳಂತೆ ಒಟ್ಟು 20 ಎಕರೆ ಪ್ರದೇಶದ ಲೀಜ್ ಗೆ ಅರ್ಜಿ ಹಾಕಿದರು. ಪುನಃ ಅರಣ್ಯ ಇಲಾಖೆಯವರು ಈ ಸ್ಥಳ ತಮ್ಮದಲ್ಲ ಎಂದು ತಪ್ಪು ಮಾಹಿತಿ ನೀಡಿದರು. ಆಗ ಅರ್ಜಿ ಸ್ವೀಕೃತವಾಯಿತು. ಹೀಗೆ ಹೊಸಹಳ್ಳಿ ಗ್ರಾಮದವರಿಗೆ ಅನ್ಯಾಯ ಮಾಡಿ, ಬಡ ಜನರ ವಿರುದ್ಧ ಅಧಿಕ ಪ್ರಕರಣಗಳನ್ನು ದಾಖಲಿಸಿ, ಅಕ್ರಮವಾಗಿ ಹಣ ಸಂಪಾದಿಸುವವರಿಗೆ ಅನುಕೂಲ ಮಾಡಿಕೊಟ್ಟಂತಾಗಿದೆ. ಇದಕ್ಕೆ ಕಾರಣಿಕರ್ತರಾದ ಹಿಂದಿನ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ಉಪ ಅರಣ್ಯಸಂರಕ್ಷಣಾಧಿಕಾರಿ, ಜಿಲ್ಲಾ ಹಾಗೂ ವಲಯ ಅರಣ್ಯಾಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲೇಬೇಕು ಎಂದು ಒತ್ತಾಯಿಸಿದರು. ಕಳೆದ ಒಂದು ತಿಂಗಳ ಹಿಂದೆ ಮಧುರೆ ರೈತರೊಬ್ಬರು ಅರಣ್ಯ ಭೂಮಿಯಲ್ಲಿ ಅಡಿಕೆ ಹಾಕಿದ್ದಾರೆಂದು ಫಸಲಿಗೆ ಬಂದಿದ್ದ 2 ಸಾವಿರ ಅಡಿಕೆ ಗಿಡಗಳನ್ನು ರಾತ್ರೋ ರಾತ್ರಿ ಕಡಿಯಲಾಗಿದೆ.

ಪುಟ 2

# 38ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಯಶಸ್ವಿ

» ದಾವಣಗೆರೆ




ಕಳೆದ ತಿಂಗಳು ದಾವಣಗೆರೆಯಲ್ಲಿ ನಡೆದ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಸಂಭ್ರಮ, ಸಡಗರ ಮತ್ತು ಅರ್ಥಪೂರ್ಣವಾಗಿ ನಡೆಯುವ ಮೂಲಕ ಯಶಸ್ವಿಯಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದರಲ್ಲದೇ ಈ ಸಮ್ಮೇಳನ ಯಶಸ್ವಿಗೆ ಸಹಕರಿಸಿದ ಜನಪ್ರತಿನಿಧಿಗಳು, ಜಿಲ್ಲಾಡಳಿತ ಮತ್ತು ಪ್ರತಿಯೊಬ್ಬ ಪತ್ರಕರ್ತರಿಗೆ ಕೃತಜ್ಞತೆ ಸಲ್ಲಿಸಿದರು.

ಪ್ರೆಸ್‌ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮ್ಮೇಳನ ನಡೆಯುವ ಮುಂಚೆ ಅನೇಕ ಸವಾಲುಗಳು ಮತ್ತು ನಿಜಕ್ಕೂ ಗೊಂದಲ ಇತ್ತು. ಇದನ್ನೆಲ್ಲ ನೋಡಿದಾಗ ಸಮ್ಮೇಳನ ಮುಂದೂಡುವ ಆಲೋಚನೆಯೂ ಇತ್ತು. ಆದರೆ, ಕಟ್ಟ ಕಡೆಯ ಸಂಘದ ಸದಸ್ಯರಿಂದ ಹಿಡಿದು ಪ್ರತಿಯೊಬ್ಬರ ಅಭೂತಪೂರ್ವ ಸಹಕಾರ ನಿರೀಕ್ಷೆಗೂ ಮೀರಿ ಸಿಕ್ಕಿದ್ದರಿಂದ ಸಮ್ಮೇಳನ ಯಶಸ್ವಿಯಾಯಿತು. ಇದಕ್ಕೆ ರಾಜ್ಯ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಜ್ಯದ ಸಮಸ್ತ ಪತ್ರಕರ್ತರ ಪರವಾಗಿ ಅಭಿನಂದನೆ ಸಲ್ಲಿಸುತ್ತಿದ್ದೇನೆ ಎಂದು ಹೇಳಿದರು.

ಕಳೆದ ಮೂರು ದಶಕಗಳಿಂದ ಗ್ರಾಮೀಣ ಭಾಗದ ಪತ್ರಕರ್ತರಿಗೆ ಬಸ್ ಪಾಸ್ ವ್ಯವಸ್ಥೆ ಒಳಗೊಂಡಂತೆ 8 ಹಕ್ಕೊತ್ತಾಯ ಮಾಡಲಾಗಿತ್ತು. ಅದು ದಾವಣಗೆರೆಯಲ್ಲಿ ನಡೆದ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿಸಿದ್ದರಾಮಯ್ಯಪತ್ರಕರ್ತರಿಗೆ ಬಸ್‌ಪಾಸ್ ಕೊಡುವುದಾಗಿ ಹೇಳಿದ್ದರು. ಅದರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಾರಿಯ ಬಜೆಟ್‌ನಲ್ಲಿ ಈ ಬೇಡಿಕೆ ಘೋಷಿಸುವ ಮೂಲಕ ಮೂರು ದಶಕಗಳ ಬೇಡಿಕೆ ಈಡೇರಿದೆ. ಪತ್ರಕರ್ತರನ್ನು ಯಶಸ್ವಿನಿ ಯೋಜನೆಗೆ ಸೇರ್ಪಡೆ ಮಾಡುವುದು ಒಳಗೊಂಡಂತೆ ಇತರೆ ಎಲ್ಲ ಬೇಡಿಕೆಗಳ ಈಡೇರಿಕೆಗೆ ಸಂಘದ ಹೋರಾಟ ನಿರಂತರವಾಗಿರಲಿದೆ ಎಂದು ತಿಳಿಸಿದರು.

ದಾವಣಗೆರೆಯಲ್ಲಿನ ಸಮ್ಮೇಳನದಲ್ಲಿ ಬರೀ ಉದ್ಘಾಟನೆ, ಸಮಾರೋಪವಲ್ಲದೆ ಪತ್ರಿಕೋದ್ಯಮ ಮತ್ತು ಪತ್ರಕರ್ತರು ಎದುರಿಸುತ್ತಿರುವ ವಿವಿಧ ಸವಾಲು, ಸಮಸ್ಯೆಗಳು, ಪರಿಹಾರೋಪಾಯಗಳ ಕುರಿತಂತೆ ನಾಲ್ಕು ಅರ್ಥ ಪೂರ್ಣ ಗೋಷ್ಠಿಗಳು ನಡೆಸಲಾಯಿತು. ಈ ಎಲ್ಲಾ ಗೋಷ್ಠಿಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಜೊತೆಗೆ ಹಿರಿಯ ಪತ್ರಕರ್ತರ ಪ್ರಶಂಸೆಗೆ ಪಾತ್ರವಾಗಿತ್ತು ಎಂದರು.

ನಾಡಿನ ಎಲ್ಲೆಡೆಯೂ ದಾವಣಗೆರೆ ಸಮ್ಮೇಳನದ ಯಶಸ್ಸಿನ ಬಗ್ಗೆ ಪ್ರಶಂಸನೀಯ ಮಾತುಗಳು ಕೇಳಿ ಬರುತ್ತಿವೆ. ಈ ರೀತಿಯ ಉತ್ತಮ ಪ್ರತಿಕ್ರಿಯೆಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ವರದಿಗಾರರ ಕೂಟ, ಉಪ ಸಮಿತಿಗಳ ಎಲ್ಲ ಸದಸ್ಯರ ಸಾಂಘಿಕ ಪ್ರಯತ್ನ, ಅತ್ಯುತ್ತಮ ಸಹಕಾರ ಕಾರಣವೂ ಸಮ್ಮೇಳನ ಯಶಸ್ವಿಗೆ ಮುಖ್ಯವಾಗಿದೆ ಎಂದು ಅಭಿಮಾನದಿಂದ ಹೇಳಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ್, ಕಾನಿಪ ಜಿಲ್ಲಾಧ್ಯಕ್ಷ ಇ.ಎಂ. ಮಂಜುನಾಥ್ ಏಕಬೋಟೆ, ಪ್ರಧಾನ ಕಾರ್ಯದರ್ಶಿ ಎ. ಫಕ್ರುದ್ಧೀನ್, ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ, ಪ್ರಧಾನ ಕಾರ್ಯದರ್ಶಿ ಡಾ. ಸಿ. ವರದರಾಜ್, ಕಾನಿಪ ರಾಜ್ಯ ಸಮಿತಿ ಸದಸ್ಯ ಕೆ. ಚಂದ್ರಣ್ಣ, ಕಾನಿಪ ಖಜಾಂಚಿ ಎನ್.ವಿ. ಬದರಿನಾಥ್, ಪತ್ರಕರ್ತರಾದ ಮಂಜುನಾಥ್ ಕಾಡಜ್ಜಿ, ನಾಗರಾಜ್ ಬಡದಾಳ್, ಎಂ.ಬಿ. ನವೀನ್ ಕುಮಾರ್, ಜೆ.ಎಸ್. ವೀರೇಶ್ ಆರ್ ಎಸ್ ತಿಪ್ಪೇಸ್ವಾಮಿ ಮತ್ತಿತರರಿದ್ದರು.

## ಬಿಜೆಪಿಯಿಂದ ನಾರಿವಂದನಾಶಕ್ತಿ ಮ್ಯಾರಥಾನ್

» ಚಿತ್ರದುರ್ಗ




ನಾರಿ ವಂದನಾ ಶಕ್ತಿ ಮ್ಯಾರಥಾನ್ ಅಭಿಯಾನ ಅಂಗವಾಗಿ ಸೋಮವಾರ ಬಿಜೆಪಿ ಮಹಿಳಾ ಕಾರ್ಯಕರ್ತರು ಹಾಗೂ ಕಾಲೇಜು ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ನಗರದ ಶ್ರೀ ನೀಲಕಂಠೇಶ್ವರ ದೇವಸ್ಥಾನದಿಂದ ಜಿಲ್ಲಾಧಿಕಾರಿ ವೃತ್ತದವರೆಗೆ ಮ್ಯಾರಥಾನ್ ನಡೆಸಿದರು.

ವಿಧಾನ ಪರಿಷತ್‌ನ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಭಾರತ ದೇಶ ಹಿಂದಿನಿಂದಲೂ ಸಹಾ ಮಹಿಳೆಯರಿಗೆ ಉತ್ತಮವಾದ ಸ್ಥಾನವನ್ನು ನೀಡುತ್ತಾ ಬಂದಿದೆ. ಇದಕ್ಕೆ ನಮ್ಮ ದೇಶದ ಪ್ರಧಾನ ಮಂತ್ರಿಗಳು ಸಹಾ ಮಹಿಳೆಯರಿಗೆ ಗೌರವನ್ನು ನೀಡಿದ್ದಾರೆ. ಮಾ.8ರ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪೂರ್ವಬಾವಿಯಾಗಿ ಈ ರೀತಿಯಾದ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ.

ಇದನ್ನು ಅನೇಕ ಮಹಿಳಾ ಸಂಘಟನೆಗಳಿಂದ ಬಿಜೆಪಿ ಕಾರ್ಯಕ್ರಮವನ್ನು ಆಯೋಜಿಸಿದೆ. ಮಹಿಳೆ ಸಧೃಢವಾಗಿರಬೇಕು ಆಗ ಮಾತ್ರ ಮನೆಯಿಂದ ಹಿಡಿದು ದೇಶವೂ ಸಹಾ ಸಧೃಢವಾಗಿರುತ್ತದೆ. ಎಂಬ ಜಾಗೃತಿಯನ್ನು ಚಿತ್ರದುರ್ಗದಲ್ಲಿ ಮ್ಯಾರಾಥಾನ ಮೂಲಕ ಮಾಡಲಾಗಿದೆ ಎಂದರು.

ಜಿಲ್ಲಾಧ್ಯಕ್ಷ ಎ.ಮುರಳಿ, ನಾರಿ ವಂದನಾ ಶಕ್ತಿ ಮ್ಯಾರಥಾನ್ ಜಿಲ್ಲಾ ಸಂಚಾಲಕಿ ರತ್ನಮ್ಮ, ಶಾಂತಮ್ಮ, ಶೀಲಾ, ಎನ್.ವೀಣಾ, ದೊಡ್ಡ ಕಾಂಚನ, ಬಸಮ್ಮ ಸಿದ್ದವ್ವನಹಳ್ಳಿ ಕವಿತಾ, ಮಂಜುಳಮ್ಮ, ಬಿಜೆಪಿ ಮುಖಂಡರಾದ ಸಂಪತ್ ಕುಮಾರ್, ವೆಂಕಟೇಶ್ ಯಾದವ್, ಡಿ.ಕೆ. ಜಯ್ಯಣ್ಣ, ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ, ನಂದಿ ನಾಗರಾಜ್, ಕಿರಣ್ ಕುಮಾರ್, ಶಂಭು, ನಾಗರಾಜ್ ಸಂತೋಷ್ ಭಾಗವಹಿಸಿದ್ದರು.

## ಕುಟುಂಬದ ನೆಮ್ಮದಿಯ ಜೀವನಕ್ಕೆ ನಿಯಮ ಪಾಲಿಸಿ: ದಿವ್ಯಮಣಿ



» ಹೊಸದುರ್ಗ

ಸಾರ್ವಜನಿಕರು ವಾಹನ ಚಲಾಯಿಸುವಾಗ ಕಡ್ಡಾಯವಾಗಿ ರಸ್ತೆ ನಿಯಮವನ್ನು ಪಾಲಿಸಿ, ಕುಟುಂಬದ ನೆಮ್ಮದಿಗೆ ಸಹಕಾರವಾಗಬೇಕೆಂದು ಹೊಸದುರ್ಗ ಬೀಟ್ ಪೊಲೀಸ್ ದಿವ್ಯಮಣಿ ಹೇಳಿದರು. ತಾಲೂಕಿನ ಜೋಡಿ ಗ್ರಾಮದಲ್ಲಿ ನಡೆದ ಸಾರ್ವಜನಿಕರಿಗೆ ರಸ್ತೆ ಸುರಕ್ಷಾ ನಿಯಮದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕುಟುಂಬದ ಯಜಮಾನ ನನ್ನ ನಂಬಿಕೊಂಡು ಹೆಂಡತಿ,ಮಕ್ಕಳು, ತಂದೆ ತಾಯಿಯಂದಿರು ಬದುಕು ನಡೆಸುತ್ತಿರುತ್ತಾರೆ. ರಸ್ತೆಯಲ್ಲಿ ದ್ವಿಚಕ್ರವಾಹನ ನಡೆಸಿಕೊಂಡು ಹೋಗುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕೆಂದು ಸೂಚಿಸಿದರು.ಯಾವುದೇ ಅಪಘಾತ ಸಂಭವಿಸಿದರೂ ಮನುಷ್ಯನ ಯಾವುದೇ ಅಂಗಾಂಗಗಳಿಗೆ ಹೆಚ್ಚು ಹಾನಿಯಾಗುವುದಿಲ್ಲ. ಹೆಲ್ಮೆಟ್ ಧರಿಸದೆ ದ್ವಿಚಕ್ರವಾಹನ ಓಡಿಸಿದಾಗ ಆಕಸ್ಮಿಕವಾಗಿ ಅಪಘಾತವಾದ ನಂತರ ಮೊದಲು ತಲೆಗೆ ಪೆಟ್ಟು ಬಿದ್ದು ತುಂಬಾ ತೊಂದರೆ ಅನುಭವಿಸಬೇಕಾಗುತ್ತದೆ. ತಲೆಗೆ ಬೆಟ್ಟದ ವ್ಯಕ್ತಿ ಬದುಕುಳಿಯುವುದು ಕಷ್ಟಕರವಾಗಿರುತ್ತದೆ ಎಂದು ತಿಳಿಸಿದರು. ಮುಂಜಾಗ್ರತ ಕ್ರಮವಾಗಿ ಎಲ್ಲಾ ದ್ವಿಚಕ್ರ ಸವಾರರು ಹೆಲ್ಮೆಟ್ ಧರಿಸಲೇಬೇಕು. ಚಿತ್ರದುರ್ಗ ಜಿಲ್ಲಾ ಎಸ್ ಪಿ ಸಾಹೇಬರ ಆದೇಶದಂತೆ ನಮಗೆ ಜವಾಬ್ದಾರಿ ವಹಿಸಿರುವ ಗ್ರಾಮಗಳಲ್ಲಿ ಯಾವುದೇ ಗಲಾಟೆ ಗದ್ದಲ, ಇಸ್ಪೀಟ್ ಆಡುವುದು, ಅಪ್ರಾಪ್ತ ಬಾಲಕಿಯರಿಗೆ ಕಿರುಕುಳಕೊಡುವುದು, ಮಾದಕ ವ್ಯಸನಿ ಮಾಡುವುದು ಅಕ್ಷಮ್ಯ ಅಪರಾಧವಾಗಿದ್ದು, ಇಂತಹ ಯಾವುದೇ ಪ್ರಕರಣಗಳು ಬೆಳಕಿಗೆ ಬಂದರೆ ತಕ್ಷಣ ನಮಗೆ ಅಥವಾ 112 ನಂಬರಿಗೆ ದೂರವಾಣಿ ಮೂಲಕ ಕರೆ ಮಾಡಿ ತಿಳಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಪೊಲೀಸ್ ಸಿಬ್ಬಂದಿಯಾದ ಬೀರೇಶ್, ಗ್ರಾಮಸ್ಥರಾದ ತುಂಬಿನಕೆರೆ ಬಸವರಾಜ್, ಶಿಕ್ಷಕ ಜಯರಾಮ್, ರಾಮಚಂದ್ರಚಾರಿ, ಶಾಂತಕುಮಾರ್, ಓಂಕಾರ್, ಟಿ ರಮೇಶ್, ರಾಜಪ್ಪ, ಪ್ರಸನ್ನ, ದರ್ಶನ್ ಮತ್ತು ತಿಪ್ಪೇಸ್ವಾಮಿ ಸೇರಿದಂತೆ ಹಲವರಿದ್ದರು.

## ಕೆ.ಡಿ.ಪಿ ಸಭೆ

**ದಾವಣಗೆರೆ:** ಪ್ರಸಕ್ತ ಸಾಲಿನ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯನ್ನು ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಮಾ.6 ರಂದು ಸಂಜೆ 4 ಗಂಟೆಗೆ ಜಿ.ಪಂ. ಎಸ್.ಎಸ್. ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿ.ಪಂ ಸಿಇಓ ಸುರೇಶ್ ಬಿ ಇಟ್ನಾಳ್ ತಿಳಿಸಿದ್ದಾರೆ.

### ಸಮಾಜದ ಮುಖ್ಯವಾಹಿನಿಯಲ್ಲಿ ಮಡಿವಾಳ ಸಮುದಾಯ ಗುರುತಿಸಿಕೊಳ್ಳಲು ತಾಲ್ಲೂಕು ಮಟ್ಟದ ಸಮಾವೇಶ

## ಯಶಸ್ವಿಗೊಳಿಸಲು ಎಲ್ಲರೂ ಕೈಜೊಡಿಸಿ: ನಾಗರಾಜು

» ಚಳ್ಳಕೆರೆ



ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಗೌರವ, ಘನತೆಯನ್ನು ಕಾಪಾಡುವ ನಿಟ್ಟಿನಲ್ಲಿ ತಾಲ್ಲೂಕು ಮಡಿವಾಳರ ಸಮುದಾಯ ಹೆಚ್ಚು ಶ್ರಮಿಸುತ್ತಿದೆ. ತಮ್ಮ ಮೂಲಕಸುಬಿನಿಂದಲೇ ನಗರ ಹಾಗೂ ಗ್ರಾಮೀಣ ಪ್ರದೇಶದ ಜನರ ಮನವನ್ನು ಗೆಲ್ಲುವ ಮೂಲಕ ಈ ಸಮಾಜದಲ್ಲಿ ತನ್ನದೇಯಾದ ನೆಲೆಯನ್ನು ಕಂಡುಕೊಳ್ಳಲು ಸಫಲವಾಗಿದೆ. ಮಡಿವಾಳ ಸಮುದಾಯ ಸಂಘಟಿತವಾದರೆ ಮಾತ್ರ ಸೌಲಭ್ಯಪಡೆಯಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಮಾರ್ಚ್6ರ ಬುಧವಾರ ನಗರ ವಾಸವಿ ಮಹಲ್ ನಡೆಯಲಿದೆ ಎಂದು ತಾಲ್ಲೂಕು ಮಡಿವಾಳ ಸಂಘದ ಪ್ರಧಾನ ಕಾರ್ಯದರ್ಶಿ ಕರೀಕೆರೆ ನಾಗರಾಜು ತಿಳಿಸಿದರು.

ಅವರು, ಸೋಮವಾರ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ತಾಲ್ಲೂಕು ಮಡಿವಾಳ ಸಮುದಾಯ ಸಂಘಟನೆಗೆ ಹೊಸ ಆಯಾಮ ಸೃಷ್ಠಿ ಮಾಡುವ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಿದ್ದು, ಚಿತ್ರದುರ್ಗದ ಮಡಿವಾಳಪೀಠದ ಡಾ.ಬಸವಮಡಿ ವಾಳಮಾಚಿದೇವ ಕಾರ್ಯಕ್ರಮದ ಸಾನಿಧ್ಯ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಬೃಹತ್ ಮೆರವಣಿಗೆಗೆ ಚಾಲನೆ ನೀಡಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ಅಧ್ಯಕ್ಷ ಎಂ.ನಾಗರಾಜು ವಹಿಸುವರು. ಜಿ.ಸಿ.ರಾಜಶೇಖರ್ ವಿಶೇಷ ಉಪನ್ಯಾಸ ನೀಡುವರು, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ರಘುಕೌಟಿಲ್ಯ, ರಾಜ್ಯಾಧ್ಯಕ್ಷ ಸಿ.ನಂಜಪ್ಪ, ಜಿಲ್ಲಾಧ್ಯಕ್ಷ ರಾಮಜ್ಜ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಪತ್ರಿಕಾಗೋಷ್ಠಿಯಲ್ಲಿ ಅಧ್ಯಕ್ಷ ಬುಡ್ನಹಟ್ಟಿ ಎಂ.ನಾಗರಾಜು, ಗೌರವಾಧ್ಯಕ್ಷ ಎನ್. ಮಂಜುನಾಥ, ನಗರಂಗೆರೆತಿಪ್ಪೇಶ್, ವಿಜಯಣ್ಣ, ನಾಗರಾಜು, ರಾಜು, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ಶಾಸಕರ ಅಧ್ಯಕ್ಷತೆಯಲ್ಲಿ ನಡೆದ ಬಗರ್ ಹುಕ್ಕುಂ ಸಕ್ರಮೀಕರಣ ಸಮಿತಿ ಸಭೆ

# ಬಾಕಿ ಉಳಿದ ಸುಮಾರು 3485 ಅರ್ಜಿ ವಿಲೇವಾರಿಗೆ ಕ್ರಮ

» ಚಳ್ಳಕೆರೆ



ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ಶಾಸಕ ಟಿ.ರಘುಮುರ್ತಿ ಅಧ್ಯಕ್ಷತೆಯಲ್ಲಿ ಬಗರ್‌ಹುಕ್ಕುಂ ಸಮಿತಿ ಸಭೆ ನಡೆಸಲಾಯಿತು.

ಪ್ರತಿಗ್ರಾಮದಲ್ಲಿ 100 ಜಾನುವಾರುಗಳಿಗೆ 30 ಎಕರೆ ಗೋಮಾಳವನ್ನು ಮೀಸಲಿಟ್ಟು ಉಳಿದ ಭೂಮಿಯನ್ನು ಸಾಗುವಳಿದಾರರಿಗೆ ಹಂಚಿಕೆ ಮಾಡಲು ಕಾನೂನಿನಡಿ ಅವಕಾಶವಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಬಗರ್ ಹುಕ್ಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ತಾಲ್ಲೂಕಿನಾದ್ಯಂತಇರುವಜಾನುವಾರುಗಳ ಪ್ರಸ್ತುತ ಪಟ್ಟಿ ಪಡೆದು ಸಾಗುವಳಿದಾರರಿಗೂ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸಿ. ಕಾನೂನಿನಡಿ ಅರ್ಹ ಫಲಾನುಭವಿಗಳಿಗೆ ಸಾಗುವಳಿ ಭೂಮಿ ದೊರಕುವಂತೆ ಸೂಕ್ತ ಕ್ರಮವಹಿಸಬೇಕು.

1990ರಿಂದ2022ರೆಗೂ ಬಗರ್ ಹುಕ್ಕುಂ ಸಾಗುವಳಿ ಸಾವಿರಾರು ಅರ್ಜಿಗಳು ಬಂದಿವೆ. ಅದರಲ್ಲಿ ಕಾನೂನಿನಡಿ ಹಲವಾರು ಅರ್ಜಿಗಳು ವಿಲೆಯಾಗಿವೆ, ಮತ್ತೆ ಕೆಲವು ಕಡೆ ಭೂಮಿ ಸಮಸ್ಯೆ, ದಾಖಲೆಗಳಿಲ್ಲದ್ದು, ಕೆಲವರು ಸಾಗುವಳಿ ಮಾಡದಿದ್ದರೂ ಅರ್ಜಿ ಸಲ್ಲಿಸಿರುವುದು, ಭೂಮಿ ಹೊಂದಿರುವವರಿಗೆ ಕೈತಪ್ಪಿಲಿವೆ. ಯಾರಿಗೆ ಅಗತ್ಯವಾಗಿ ಭೂಮಿಯ ಅಗತ್ಯತೆ ಇದೆ, ಅಂತಹ ಅರ್ಹ ಫಲಾನುಭವಿಗಳಿಗೆ ದೊರಕಿಸುವ ನಿಟ್ಟಿನಲ್ಲಿ ಸರ್ಕಾರಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮವಹಿಸುವ ಭರವಸೆ ನೀಡಿದರು.ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, 1990ರಲ್ಲಿ ರೂಲ್ 50 ಕಸಬಾ ಮತ್ತು ಪರಶುರಾಮಪುರ ವ್ಯಾಪ್ತಿಯಲ್ಲಿ 11156 ಅರ್ಜಿಗಳು ಬಂದಿದ್ದು, 4994 ಸಕ್ರಮ, 7062 ಅರ್ಜಿಗಳನ್ನು ವಿಲೇಯಾಗಿವೆ. ರೂಲ್ 53ರಡಿ 1999–2000ರಲ್ಲಿ ಒಟ್ಟು17945 ಅರ್ಜಿಗಳಲ್ಲಿ 2668ಸಕ್ರಮಗೊಂಡು, 15233ಗಳು ವಿವಿಧ ಕಾರಣಗಳಿಂದ ರಿಜೇಟಾಗಿವೆ. 17901ಅರ್ಜಿಗಳು ವಿಲೆಗೊಂಡು 44 ಅರ್ಜಿಗಳು ಬಾಕಿ ಇವೆ. ರೂಲ್ 57ರಲ್ಲಿ 2018–22ರ ವರೆಗೆ 3485 ಅರ್ಜಿಗಳು ಬಂದಿದ್ದು ಅವುಗಳ ಪರಿಶೀಲನಾ ಕಾರ್ಯ ನಡೆಯುತ್ತುದೆ.ರೂಲ್ 57ರಲ್ಲಿ 3488ಅರ್ಜಿಗಳು ಬಂದಿದ್ದು, ಗೋಮಾಳವಿಲ್ಲದೆ ಸುಮಾರು 2688 ಅರ್ಜಿಗಳನ್ನು ವಿಲೇ ಮಾಡಲಾಗಿದೆ. ಅದರಲ್ಲೂ ಕೆಲವೊಂದು ಅರ್ಹ ಫಲಾನುಭವಿಗಳಿಗೆ ಗ್ರಾಮದಲ್ಲಿ ಸರ್ಕಾರಿ ಜಮೀನಿಗೆ ಅನುಗಿಣವಾಗಿ ಹಂಚಿಕೆ ಮಾಡಲು ಸರ್ಕಾರದ ಆದೇಶವಿದ್ದು, ಮುಂದಿನ ದಿನಗಳಲ್ಲಿ ಸಭೆ ನಡೆಸಿ ನಿರ್ದಾರ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ಚಿತ್ರದುರ್ಗ ತಹಶೀಲ್ದಾರ್ ನಾಗಮಣಿ, ಸಮಿತಿ ಸದಸ್ಯರಾದ ಸರೋಜಮ್ಮ, ಯರಬಾಲಪ್ಪ, ನಾಗರಾಜಪ್ಪ, ಶಿರಸ್ತೇದಾರ್ ಸದಾಶಿವಪ್ಪ, ಸುಮಲತಾ ಮುಂತಾದವರು ಉಪಸ್ಥಿತರಿದ್ದರು.


# ಫಾಸ್ಟ್ ನ್ಯೂಸ್


## ಅಕ್ರಮ ಗಣಿಗಾರಿಕೆಗೆ ಬೆಂಬಲ: ಕ್ರಮ ತೆಗೆದುಕೊಳ್ಳಲು ಒತ್ತಾಯ

» ಮೊದಲ ಪುಟದಿಂದ

ಬಡವರ ಮೇಲಿನ ದರ್ಪ ನಿಲ್ಲಿಸಿ. ಪಕ್ಕದ ಭಗೀರಥ ಪೀಠಕ್ಕೆ ಸಂಬಂಧಿಸಿದ ಅಡಿಕೆ ಹಾಗೂ ತೆಂಗು ಅರಣ್ಯ ಇಲಾಖೆಗೆ ಸೇರಿದ್ದು ಅದನ್ನು ಕಡಿಯಬಹುದಿತ್ತಲಾ? ಬಡವರ ಮೇಲೆ ದಬ್ಬಾಳಿಕೆ ನಡೆಸುತ್ತಿರುವ ವಲಯ ಅರಣ್ಯಾಧಿಕಾರಿ ವಿರುದ್ಧ ಸೂಕ್ತ ಕ್ರಮ ಜರುಗಿಸುವವರೆಗೂ ಯಾವುದೇ ಕಾರಣಕ್ಕೂ ಸತ್ಯಾಗ್ರಹ ಹಿಂಪಡೆಯುವುದಿಲ್ಲ ಎಂದು ಒತ್ತಾಯಿಸಿದರು.

**ಜಿಲ್ಲಾ ಅರಣ್ಯಾಧಿಕಾರಿ ಭೇಟಿ:** ಕೂಡಲೇ ಸ್ಥಳಕ್ಕೆ ಆಗಮಿಸಿದ ಜಿಲ್ಲಾ ಅರಣ್ಯಾಧಿಕಾರಿ ರಾಜಣ್ಣ ಮಾತನಾಡಿ, ನಮಗೆ ಪರಿಶೀಲಿಸಲು ಕಾಲಾವಕಾಶ ಕೊಡಿ, ವಾರದೊಳಗೆ ತೀರ್ಮಾನ ಕೈಗೊಳ್ಳಲಾಗುವುದು. ಕೂಡಲೇ ಸತ್ಯಾಗ್ರಹ ಹಿಂಪಡೆಯಿರಿ ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಗೂಳಿಹಟ್ಟಿ ಶೇಖರ್ 2022 ರಲ್ಲಿಯೇ ಡೀಮ್ಡ್ ಅರಣ್ಯದಿಂದ ಹಿಂಪಡೆದಿರುವ ಪ್ರದೇಶದಲ್ಲಿ ಒಬ್ಬ ವ್ಯಕ್ತಿ ದಿಂಡು ತಂದಿದ್ದಕ್ಕೆ ಅರಣ್ಯ ಇಲಾಖೆಯವರು ಪ್ರಕರಣ ದಾಖಲಿಸಿದ್ದಾರೆ. ನಿಯಮನುಸಾರ ಕರ್ತವ್ಯ ನಿರ್ವಹಿಸುವುದಾದರೆ, ಕೂಡಲೇ ಭಗೀರಥ ಪೀಠದಲ್ಲಿನ 500 ಎಕರೆ ಭೂಮಿಯಲ್ಲಿನ ಅಡಿಕೆ ಹಾಗೂ ತೆಂಗಿನ ಗಿಡಗಳನ್ನು ತೆಗೆಸಿ ನಿಮ್ಮ ತಾಕತ್ತು ತೋರಿಸಿ. ಬಡವರ ಮೇಲೆ ದರ್ಪ ತೋರಿಸುವುದು ಸರಿಯೇ? ಕರ್ತವ್ಯ ಲೋಪವೆಸಗಿರುವ ವಲಯ ಅರಣ್ಯಾಧಿಕಾರಿಯನ್ನು ಕರ್ತವ್ಯದಿಂದ ವಜಾಗೊಳಿಸಿ, ಅಲ್ಲಿಯವರೆಗೂ ಸತ್ಯಾಗ್ರಹ ಹಿಂಪಡೆಯುವುದಿಲ್ಲವೆಂದು ಬಿಗಿಪಟ್ಟು ಹಿಡಿದರು.

## ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಂದ ಕೌಶಲ್ಯಾಭಿವೃದ್ಧಿಗೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ 2023–24 ನೇ ಸಾಲಿಗೆ ಪ.ಪಂಗಡಗಳ ಅಭಿವೃದ್ಧಿ ನಿಗಮ ವತಿಯಿಂದ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ–ಯುವತಿಯರಿಗೆ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಹ ಫಲಾಪೇಕ್ಷಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. SEDP on self employed Tailor, Domestic Data entry oparater ಗೆ 2 ತಿಂಗಳ(60 ದಿನಗಳ) ತರಬೇತಿ, SEDP on Boutique, Assistant Hair Therapist, Fashion Designer, Hardware Repair Technician, Hair Stylist, Beauty Therapist, Solar Panel Installation and Service ಗೆ 1 ತಿಂಗಳ (30 ದಿನಗಳ) ತರಬೇತಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಕಾನೂನು ವಿದ್ಯಾರ್ಥಿಗಳಿಂದ ಕಾನೂನು ಅರಿವು ನೆರವು ಬೀದಿನಾಟಕ

» ದಾವಣಗೆರೆ

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆರ್.ಎಲ್ ಕಾನೂನು ಕಾಲೇಜು, ದಾವಣಗೆರೆ ಇವರ ಸಹಯೋಗದಲ್ಲಿ ಮಾ.5 ರಂದು ಸಂಜೆ 4.30 ಕ್ಕೆ ನಗರದ ರಾಂ ಅಂಡ್ ಕೋ ಸರ್ಕಲ್‌ನಲ್ಲಿ ಆರ್.ಎಲ್.ಲಾ ಕಾಲೇಜಿನ ಐದನೇ ವರ್ಷ ಹಾಗೂ 7 ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಂದ ಕಾನೂನು ಅರಿವು ನೆರವು ಬೀದಿನಾಟಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಹಿರಿಯ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್.ಎಂ.ಕರಣ್ಣನವರ್ ಉದ್ಘಾಟಿಸುವರು. ಆರ್.ಎಲ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಎಸ್.ಸತೀಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಬಾಪೂಜಿ ವಿದ್ಯಾಸಂಸ್ಥೆಯ ಆಡಳಿತ ಮತ್ತು ಶೈಕ್ಷಣಿಕ ನಿರ್ದೇಶಕರಾದ ಡಾ.ಎಂ.ಜಿ.ಈಶ್ವರಪ್ಪ, ಜಿಲ್ಲಾ ಕ್ರೀಡಾಪಟುಗಳ ಸಂಘದ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ ಭಾಗವಹಿಸುವರು.

## ರಸ್ತೆ ಅಭಿವೃದ್ಧಿಗೆ 40 ಕೋಟಿ ರೂ ಗಳ ಅನುದಾನ: ಶಾಸಕ

» ಹೊಸದುರ್ಗ

ತಾಲೂಕಿನ ಹಾಗಲಕೆರೆ, ಮತ್ತೋಡು, ಚಿಕ್ಕಬ್ಯಾಲದಕೆರೆ ರಸ್ತೆ ಅಭಿವೃದ್ಧಿಗೆ ಗಣಿಬಾಧಿತ ಜಿಲ್ಲೆಗಳ ಅನುದಾನದಡಿಯಲ್ಲಿ 40 ಕೋಟಿ ರೂ ಗಳ ಅನುದಾನ ನೀಡಲಾಗಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಡಿದ ಅವರು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಗುತ್ತಿಗೆದಾರರು ಕೆಲಸ ಪ್ರಾರಂಭಿಸಲಿದ್ದಾರೆ. ಕಳೆದ 20 ವರ್ಷಗಳಿಂದ ಹಾಗಲಕೆರೆ–ಮತ್ತೋಡು–ಚಿಕ್ಕಬ್ಯಾಲದಕೆರೆ ರಸ್ತೆ ನಿರ್ಮಾಣ ಸಾಧ್ಯವಾಗಿರಲಿಲ್ಲ. ಕೆಲವು ಭಾಗದಲ್ಲಿ ಡಾಂಬಾರೀಕರಣ ಆಗಿದೆ. ಉಳಿದ ಕಡೆ ದುರಸ್ಥಿ ಕಾರ್ಯ ನಡೆಯಲಿದೆ.

## ಫಾಸ್ಟ್ ನ್ಯೂಸ್

### ಮಕ್ಕಳಿಗೆ ಲಸಿಕೆ ಶೇಕಡ 100 ರಷ್ಟು ಸಾಧನೆ

» **ಹೊಸದುರ್ಗ**

ತಾಲ್ಲೋಕಿನಲ್ಲಿಪಲ್ಸ್‌ಪೋಲಿಯೊಕಾರ್ಯಕ್ರಮದಲ್ಲಿ 0 ಯಿಂದ 5 ವರ್ಷದ 14857 ಮಕ್ಕಳಿಗೆ ಭಾನುವಾರ ಲಸಿಕೆ ಹಾಕುವ ಗುರಿಯೊಂದಲಾಗಿತ್ತು. ಅದರಂತೆ 14870 ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಶೇಕಡ 100 ರಷ್ಟು ಸಾಧನೆ ಮಾಡಲಾಗಿದೆ ಎಂದು ತಾಲ್ಲೋಕು ಆರೋಗ್ಯಧಿಕಾರಿ ಡಾ.ರಾಘವೇಂದ್ರ ಪ್ರಸಾದ್ ತಿಳಿಸಿದರು. ಭಾನುವಾರ ಸಂಜೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಈ ಸಾಧನೆಗೆ ಮನಗೆಲ್ಲ ಹರ್ಷ ತಂದಿದೆ. ಈ ಸಾಧನೆಗೆ ಶ್ರಮಿಸಿದ ಲಸಿಕಾ ಕಾರ್ಯಕರ್ತರಾದ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಮೇಲ್ವಿಚಾರಕರು, ವೈಧ್ಯಾಧಿಕಾರಿಗಳಿಗೆ ಅಭಿನಂದನೆಗಳನ್ನ ಸಲ್ಲಿಸುವೆ.

ಈ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ ತಾಲ್ಲೋಕು ಆಡಳಿತ ವಿವಿಧ ಇಲಾಖೆಗಳ ಸಹಕಾರವನ್ನು ಸ್ಮರಿಸುವೆ ಎಣ ಅವರು ಲಸಿಕಾ ಬೂತ್ ಗಳಿಗೆ ಮಕ್ಕಳನ್ನು ಕರೆತರಲು ಪಲ್ಸ್ ಪೋಲಿಯೊ ಕಾರ್ಯಕ್ರಮವನ್ನು ಸಾರ್ವಜನಿಕರಿಗೆ ತಲುಪಲು ವ್ಯಾಪಕ ಪ್ರಚಾರ ನೀಡಿ ಸಹಕರಿಸಿದ ಪತ್ರಿಕಾಮಾಧ್ಯಮದವರಿಗೆವಿಶೇಷಧನ್ಯವಾದಗಳನ್ನು ತಿಳಿಸಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಚಾಲನೆ ನೀಡಿದ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಬಿ.ಜಿ.ಗೋವಿಂದಪ್ಪ ರವರಿಗೆ ಹೃತ್ಪೂರ್ವಕ ಧನ್ಯವಾದಗಳನ್ನ ಸಲ್ಲಿಸಿರುವ ಅವರು ಲಸಿಕೆ, ವಾಹನ, ಪರಿಕರಗಳು ಮತ್ತು ಇತರೆ ವ್ಯವಸ್ಥೆಗಳನ್ನು ಮಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೂ ಧನ್ಯವಾದಗಳನ್ನ ಸಲ್ಲಿಸಿದರು.

### ಆಡಕರ್ ಚರ್ಮ ವಸ್ತುಗಳ ಮೇಲೆ ಶೇ 40 ರವರೆಗೆ ರಿಯಾಯಿತಿ ದರದಲ್ಲಿ ಮಾರಾಟ

» **ದಾವಣಗೆರೆ**

ನಗರದ ಎ.ವಿ.ಕೆ ಕಾಲೇಜ್ ರಸ್ತೆಯಲ್ಲಿ ಮಾ.3 ರಿಂದ 27ರ ವರೆಗೆ ಅಪ್ಪಟ ಚರ್ಮದ ಪಾದರಕ್ಷೆಗಳು, ಬೆಲ್ಟ್‌ಗಳು, ಪರ್ಸ್, ಮಹಿಳೆಯರ ವ್ಯಾನಟಿ ಬ್ಯಾಗ್‌ಗಳು ಹಾಗೂ ಆಯ್ದ ದಾಸ್ತಾನುಗಳ ಮೇಲೆ ಶೇ 10 ರಿಂದ 40 ರಷ್ಟು ರಿಯಾಯತಿ ದರದಲ್ಲಿ ಮಾರಾಟ ಮಾಡಲಾಗುತ್ತದೆ ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಜಿಲ್ಲಾ ಸಂಯೋಜಕರಾದ ಗಂಗಾಧರ್ ಎನ್. ತಿಳಿಸಿದ್ದಾರೆ.

### ಹರಿಹರದ ಜಿಟಿಟಿಸಿ ಸಂಸ್ಥೆಯಲ್ಲಿ ವಿವಿಧ ಕೋರ್ಸ್‌ಗಳಿಗೆ ತರಬೇತಿ

» **ದಾವಣಗೆರೆ**

ಹರಿಹರದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಸಂಸ್ಥೆಯಲ್ಲಿ ಎಸ್.ಸಿ.ಪಿ, ಟಿ.ಎಸ್.ಪಿ. ಯೋಜನೆಯಡಿ 16 ರಿಂದ 45 ವರ್ಷದೊಳಗಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ಶಿಷ್ಯವೇತನದೊಂದಿಗೆ ವಿವಿಧ ಕೋರ್ಸ್‌ಗಳಲ್ಲಿ ಉಚಿತ ತರಬೇತಿ ನೀಡಲಾಗುತ್ತದೆ. ಎಸ್. ಎಸ್.ಎಲ್.ಸಿ, ಪಿ.ಯು.ಸಿ, ಐಟಿಐ, ಡಿಪ್ಲೋಮ, ಬಿ.ಇ. ಮತ್ತು ಯಾವುದೇ ಪದವಿ ಪಾಸ್ ಆಗಿರುವ ಅಭ್ಯರ್ಥಿಗಳಿಗೆ ಆಟೋಮೇಷನ್ ಕಂಟ್ರೋಲ್, ಇಂಟರ್‌ನೆಟ್ ಆಫ್ ಥಿಂಗ್ಸ್, ರಿವರ್ಸ್ ಇಂಂಜಿನಿಯರಿಂಗ್, 3ಡಿ ಪ್ರಿಂಟಿಂಗ್, ವ್ಯಾಲಿಡೇಷನ್ ಲ್ಯಾಬ್, ರಿಯಾಲಿಟಿ ಲ್ಯಾಬ್, ಪ್ರೊಡಕ್ಟ್ ಡಿಸೈನ್ ಅಂಡ್ ಡೆವೆಲಪ್ ಮೆಂಟ್, ಸಿ.ಎನ್.ಸಿ ಮಿಲ್ಲಿಂಗ್ ಮಷಿನ್ ಆಪರೇಟರ್. ಸಿ.ಎನ್.ಸಿ ಪ್ರೋಗ್ರಾಮಿಂಗ್, ಆಪರೇಷನ್, ಟರ್ನರ್, ಮಿಲ್ಲರ್, ಗ್ರೈಂಡರ್, ಡಿಸೈನರ್-ಮೆಕಾನಿಕಲ್, ಪ್ರೊಡಕ್ಷನ್ ಇಂಜಿನಿಯರ್ (ಅಂಆ-ಅಂಬ), ಟೂಲ್ ರೂಮ್ ಮಷಿನಿಷ್ಟ್ ಕೋರ್ಸ್‌ಗಳಿಗೆ ತರಬೇತಿ ನೀಡಲಾಗುವುದು. ಸ್ವ ವಿವರಗಳೊಂದಿಗೆ ಅರ್ಜಿ ಸಲ್ಲಿಸಲು ಮಾ.15 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ. ಕೆಐಎಡಿಬಿ, ಇಂಡಸ್ಟ್ರಿಯಲ್ ಏರಿಯಾ ಹರ್ಲಾಪುರ, ಕೆ.ಎಸ್.ಆರ್.ಟಿ.ಸಿ ಡಿಪೋ ಹತ್ತಿರ ಹರಿಹರ, ಮೊ. 90353729971, 9611025932, 8884488202 ಸಂಖ್ಯೆಗಳಿಗೆ ಸಂಪರ್ಕಿಸಲು ಪ್ರಾಂಶುಪಾಲರು ತಿಳಿಸಿದ್ದಾರೆ.

### ಆಧುನಿಕ ಹೈನುಗಾರಿಕೆ ತರಬೇತಿ

» **ದಾವಣಗೆರೆ**

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಧುನಿಕ ಹೈನುಗಾರಿಕೆ ತರಬೇತಿಯನ್ನು ಮಾರ್ಚ್.6 ಮತ್ತು 7 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿಗೆ ಯಾವುದೇ ಪ್ರೋತ್ಸಾಹಧನ, ಭತ್ಯೆ ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಲು ತಿಳಿಸಲಾಗಿದೆ.

---

### ಚುನಾವಣಾ ಅಕ್ರಮಗಳ ತಡೆಗಾಗಿ ಆಂಧ್ರ ಅಧಿಕಾರಿಗಳ ಸಹಕಾರ ಕೋರಿಕೆ: ಟಿ.ವೆಂಕಟೇಶ್

# ಗಡಿಭಾಗದ ಚೆಕ್‌ಪೋಸ್ಟ್‌ಗಳಲ್ಲಿ ತೀವ್ರ ನಿಗಾ

» **ಚಿತ್ರದುರ್ಗ**

ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂದರ್ಭದಲ್ಲಿ ಅಕ್ರಮ ಮದ್ಯ ಸಾಗಾಣಿಕೆ ತಡೆ ಸೇರಿದಂತೆ ವಿವಿಧ ಅಕ್ರಮಗಳನ್ನು ತಡೆಗಟ್ಟಿ, ನ್ಯಾಯಸಮ್ಮತ ಚುನಾವಣೆಗೆ ಸಹಕಾರ ನೀಡುವಂತೆ ನೆರೆಯ ಆಂಧ್ರಪ್ರದೇಶ ರಾಜ್ಯದ ಅನಂತಪುರ, ಶ್ರೀ ಸತ್ಯಸಾಯಿ ಜಿಲ್ಲೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ತಿಳಿಸಿದರು.

ಲೋಕಸಭೆ ಸಾರ್ವತ್ರಿಕ ಚುನಾವಣೆ ಸಂಬಂಧ ಕೈಗೊಳ್ಳಬೇಕಿರುವ ಪ್ರಾಥಮಿಕ ಹಂತದ ಮುಂಜಾಗ್ರತಾ ಕ್ರಮಗಳ ಕುರಿತು ನೆರೆಯ ತುಮಕೂರು, ಆಂಧ್ರಪ್ರದೇಶದ ಅನಂತಪುರ, ಶ್ರೀ ಸತ್ಯಸಾಯಿ ಜಿಲ್ಲೆಯ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ರಕ್ಷಣಾಧಿಕಾರಿಗಳು, ಅಬಕಾರಿ ಇಲಾಖೆ ಸೇರಿದಂತೆ ವಿವಿಧ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶೀಘ್ರದಲ್ಲಿಯೇ ಲೋಕಸಭೆ ಸಾರ್ವತ್ರಿಕ ಚುನಾವಣೆ ಘೋಷಣೆಯಾಗಲಿದ್ದು, ಈ ಸಂದರ್ಭದಲ್ಲಿ ಚುನಾವಣೆ ಸಂಬಂಧ ಜರುಗಬಹುದಾದ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಸುಮಾರು 35 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗುವುದು.



ಆಂಧ್ರಪ್ರದೇಶದೊಂದಿಗೆ ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಹಿರಿಯೂರು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಸುಮಾರು 150 ಕಿ.ಮೀ. ಗಡಿ ಪ್ರದೇಶ ಹಂಚಿಕೊಂಡಿದ್ದು, ಚುನಾವಣೆ ಸಂದರ್ಭದಲ್ಲಿ ನೆರೆಯ ರಾಜ್ಯದಿಂದ ಈ ಜಿಲ್ಲೆಯೆಡೆಗೆ ಅಕ್ರಮವಾಗಿ ಮದ್ಯ, ವಿವಿಧ ಬಗೆಯ ಸಾಮಗ್ರಿಗಳ ಸಾಗಾಣಿಕೆ ಮಾಡುವುದು, ಕೆಲ ವ್ಯಕ್ತಿಗಳು ಜಿಲ್ಲೆಯೊಳಗೆ ಆಗಮಿಸಿ, ಚುನಾವಣೆಯ ಮೇಲೆ ಪ್ರಭಾವ ಬೀರುವಂತಹ ಸಾಧ್ಯತೆಗಳಿರುತ್ತವೆ. ಹೀಗಾಗಿ ಇಂತಹ ಅಕ್ರಮ ಚಟುವಟಿಕೆಗಳನ್ನು ನಿಗ್ರಹಿಸುವ ಸಲುವಾಗಿ ಆಂಧ್ರದ ಗಡಿಯಲ್ಲಿ ಬರುವ ಮೊಳಕಾಲ್ಮೂರು ತಾಲ್ಲೂಕಿನ ಉಡೇವು, ಮಲ್ಲಸಮುದ್ರ, ಯದ್ದಲುಬೊಮ್ಮನಹಟ್ಟಿ, ಪಾತಪ್ಪನಗುಡಿ, ಕಣಮಪ್ಪೆ. ಚಳ್ಳಕೆರೆ ತಾಲ್ಲೂಕಿನ ನಾಗಪ್ಪನಹಳ್ಳಿ ಗೇಟ್. ಹಿರಿಯೂರು ತಾಲ್ಲೂಕಿನ ಖಂಡೇನಹಳ್ಳಿ ಹಾಗೂ ಪಿ.ಡಿ. ಕೋಟೆ ಕ್ರಾಸ್ ಸೇರಿದಂತೆ ಒಟ್ಟು 08 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ, ತೀವ್ರನಿಗಾ ವಹಿಸಲಾಗುವುದು. ಅದೇ ರೀತಿ ಆಂಧ್ರಪ್ರದೇಶ ರಾಜ್ಯದ ವ್ಯಾಪ್ತಿಯಲ್ಲಿಯೂ ಅಧಿಕಾರಿಗಳು ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಿ, ಅಕ್ರಮವಾಗಿ ಅಲ್ಲಿಂದ ಮದ್ಯ ಸಾಗಾಣಿಕೆಯಾಗದಂತೆ ಹಾಗೂ ಮತದಾರರಿಗೆ ಹಂಚಿಕೆ ಮಾಡುವ ಸಲುವಾಗಿ ವಿವಿಧ ಸಾಮಗ್ರಿಗಳನ್ನು ಸಾಗಿಸದಂತೆ ನಿಗಾ ವಹಿಸಬೇಕು. ಅಲ್ಲದೆ ಚುನಾವಣಾ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ, ಹಾಗೂ ಚುನಾವಣೆಯ ಮೇಲೆ ಪ್ರಭಾವ ಬೀರದಂತೆ ಮಾಡಲು, ವಿಶೇಷ ನಿಗಾ ವಹಿಸಲು ಅಲ್ಲಿನ ಅಧಿಕಾರಿಗಳು ಕ್ರಮ ವಹಿಸಬೇಕು. ಆಂಧ್ರ ಗಡಿ ಪ್ರದೇಶ ವ್ಯಾಪ್ತಿಯಲ್ಲಿನ ಮದ್ಯದಂಗಡಗಳಲ್ಲಿ ಸರಾಸರಿಗಿಂತಲೂ ಹೆಚ್ಚಿನ ಮದ್ಯ ವಹಿವಾಟು ನಡೆಯುತ್ತಿದ್ದಲ್ಲಿ, ಅಂತಹ ವಹಿವಾಟಿನ ಬಗ್ಗೆಯೂ ನಿಗಾ ವಹಿಸಬೇಕು. ಒಟ್ಟಾರೆ ಜಿಲ್ಲೆಯಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ನೆರೆಯ ರಾಜ್ಯದ ಅಧಿಕಾರಿಗಳು ಇಲ್ಲಿನ ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಕೋರಿದರು.

ಇದಕ್ಕೆ ಪ್ರತಿಯಾಗಿ ಸ್ಪಂದಿಸಿದ ಅನಂತಪುರ ಜಿಲ್ಲೆಯ ಕಲೆಕ್ಟರ್ ಗೌತಮಿ ಎಂ. ಅವರು, ಲೋಕಸಭೆ ಸಾರ್ವತ್ರಿಕ ಚುನಾವಣೆ ಸಂದರ್ಭದಲ್ಲಿ ಅಕ್ರಮ ಚಟುವಟಿಕೆಗಳನ್ನುನಿಗ್ರಹಿಸಲು,ಚಿತ್ರದುರ್ಗ ಜಿಲ್ಲೆಯ ಗಡಿಗೆ ಹೊಂದಿಕೊಂಡಿರುವಂತೆ ಆಂಧ್ರದಲ್ಲಿಯೂ ಒಟ್ಟು 10 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ, ಅಕ್ರಮ ಮದ್ಯ ಮತ್ತು ಸಾಮಗ್ರಿಗಳ ಸಾಗಾಣಿಕೆ ತಡೆಗೆ ತೀವ್ರ ನಿಗಾ ವಹಿಸಲಾಗುವುದು ಎಂದು ಹೇಳಿದರು. ವಿಡಿಯೋ ಸಂವಾದದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಅವರು, ಚುನಾವಣಾ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ವಿರುವ ಮಾಹಿತಿ ವಿನಿಮಯ ಮಾಡಿಕೊಂಡರು. ಅನಂತಪುರ ಜಿಲ್ಲೆ ಜಿಲ್ಲಾ ರಕ್ಷಣಾಧಿಕಾರಿ ಕೆ.ಕೆ.ಎನ್. ಅನ್ಬುರಾಜನ್ ಅವರು, ಆಂಧ್ರ ಗಡಿ ಭಾಗದ ವ್ಯಾಪ್ತಿಯಲ್ಲಿ ಚುನಾವಣೆ ಸಂದರ್ಭದಲ್ಲಿ ಸ್ಥಾಪಿತ ಚೆಕ್‌ಪೋಸ್ಟ್‌ಗಳಲ್ಲಿ ಅಕ್ರಮ ತಡೆಗೆ ತೀವ್ರ ಕಟ್ಟೆಚ್ಚರ ವಹಿಸಲಾಗುವುದು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಅಬಕಾರಿ ಉಪ ಆಯುಕ್ತ ಮಾದೇಶ್, ಶ್ರೀ ಸತ್ಯಸಾಯಿ ಜಿಲ್ಲೆಯ ಕಲೆಕ್ಟರ್ ಪಿ. ಅರುಣ್ ಬಾಬು, ಸೇರಿದಂತೆ ವಿವಿಧ ಅಧಿಕಾರಿಗಳು, ಅನಂತಪುರಂ, ಶ್ರೀ ಸತ್ಯಸಾಯಿ ಜಿಲ್ಲೆಗಳ ಪೊಲೀಸ್ ಅಧೀಕ್ಷಕರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಅಬಕಾರಿ ಇಲಾಖೆ ಅಧಿಕಾರಿಗಳು, ಉಪವಿಭಾಗಾಧಿಕಾರಿಗಳು, ಇತರೆ ಅಧಿಕಾರಿಗಳು ವಿಡಿಯೋ ಸಂವಾದದಲ್ಲಿ ಪಾಲ್ಗೊಂಡಿದ್ದರು.

---

# ಲೋಕಸಭೆ ಸಾರ್ವತ್ರಿಕ ಚುನಾವಣೆ

### ಜಿಲ್ಲೆಯ ಎಲ್ಲ ಮತಗಟ್ಟೆಗಳನ್ನು ಸಜ್ಜುಗೊಳಿಸುವಂತೆ ಜಿಲ್ಲಾಧಿಕಾರಿ ವೆಂಕಟೇಶ್ ಸೂಚನೆ

» **ಚಿತ್ರದುರ್ಗ**

ಬರುವ ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಈಗಾಗಲೆ ನಿಗದಿಪಡಿಸಲಾಗಿರುವ ಎಲ್ಲ ಮತಗಟ್ಟೆಗಳನ್ನು ಮೂಲಭೂತ ಸೌಕರ್ಯಗಳೊಂದಿಗೆ ಸುಸಜ್ಜಿತಗೊಳಿಸುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಸೂಚನೆ ನೀಡಿದರು.

ಲೋಕಸಭೆ ಚುನಾವಣೆ ಸಿದ್ಧತೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಸೋಮವಾರ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳೊಂದಿಗಿನ ವಿಡಿಯೋ ಸಂವಾದದ ಬಳಿಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಈಗಾಗಲೆ ನಿಗದಿಪಡಿಸಲಾಗಿರುವ ಮತಗಟ್ಟೆಗಳಿಗೆ ಕಡ್ಡಾಯವಾಗಿ ರ್‍ಯಾಂಪ್ ವ್ಯವಸ್ಥೆ ಇರಬೇಕು, ಅಲ್ಲದೆ ಶೌಚಾಲಯ, ಕುಡಿಯುವ ನೀರು, ವಿದ್ಯುತ್ ಸಂಪರ್ಕ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಮಾಡಿಕೊಂಡು, ಮತಗಟ್ಟೆಗಳನ್ನು ಚುನಾವಣೆಗೆ ಸುಸಜ್ಜಿತಗೊಳಿಸಬೇಕು. ಅಧಿಕಾರಿಗಳು ಚುನಾವಣೆಗೆ ಅಗತ್ಯವಿರುವ ವಾಹನಗಳ ವ್ಯವಸ್ಥೆ ಮಾಡಿಕೊಳ್ಳಬೇಕು, ಚುನಾವಣಾ ಸಿಬ್ಬಂದಿಯನ್ನು ಈಗಾಗಲೆ ಗುರುತಿಸಿದ್ದು, ಮ್ಯಾಪಿಂಗ್ ಕಾರ್ಯ ಪೂರ್ಣಗೊಳಿಸಿರಬೇಕು, ಮತಎಣಿಕಾ ಕೇಂದ್ರವನ್ನು ಈಗಾಗಲೆ ಗುರುತಿಸಿದ್ದು, ಮತ ಎಣಿಕಾ ಕೇಂದ್ರಕ್ಕೆ ಅಗತ್ಯವಿರುವ ಸೌಲಭ್ಯಗಳನ್ನು ಕೈಗೊಳ್ಳಲುಸಿದ್ಧತೆಮಾಡಿಕೊಳ್ಳಬೇಕು.ಚುನಾವಣಾ ನೀತಿ ಸಂಹಿತೆ ಜಾರಿಗೊಂಡ ತಕ್ಷಣದಿಂದಲೇ ಎಂಸಿಸಿ ತಂಡ ಕಾರ್ಯಪ್ರವೃತ್ತರಾಗಬೇಕು, ಅಲ್ಲದೆ ಅಕ್ರಮಗಳನ್ನು ತಡೆಗಟ್ಟುವ ಸಲುವಾಗಿ ಸ್ಥಾಪಿಸಲಾಗುವ ಚೆಕ್‌ಪೋಸ್ಟ್‌ಗಳು ಕೂಡ ಕಾರ್ಯಾರಂಭಗೊಳ್ಳುವಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.



ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ತಹಸಿಲ್ದಾರರು, ಚುನಾವಣಾ ವಿವಿಧ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಿ.ಎಸ್.ಮಂಜುನಾಥ್ ಅವರಿಗೆ ಅಭಿನಂದನೆ



» **ಚಿತ್ರದುರ್ಗ**

ಕರ್ನಾಟಕಕಾರ್ಮಿಕಕಲ್ಯಾಣ ಮಂಡಳಿಗೆ ಉಪಾಧ್ಯಕ್ಷರಾಗಿ ಸರ್ಕಾರದಿಂದ ನೇಮಕವಾಗಿರುವ ರಾಜ್ಯ ಪೌರ ನೌಕರರ ಸಂಘದ ರಾಜ್ಯಾಧ್ಯಕ್ಷ ಜಿ.ಎಸ್. ಮಂಜುನಾಥ್ ಅವರನ್ನು ಚಿತ್ರದುರ್ಗ ನಗರಸಭೆಯ ಪೌರಾಯುಕ್ತರು ಸೇರಿದಂತೆ ಸಿಬ್ಬಂದಿ ವರ್ಗದವರು ಅಭಿನಂದಿಸಿದರು.

ಒಂದು ಕಾಲದಲ್ಲಿ ನಗರಸಭೆಯ ಸಿಬ್ಬಂದಿ ಮಾಡಿದ ಕೆಲಸಕ್ಕೆ ಸರಿಯಾದ ರೀತಿಯ ವೇತನವೂ ಸಿಗದ ಪರಿಸ್ಥಿತಿಯಲ್ಲಿ ಮಂಜುನಾಥ್‌ರವರ ನೇತೃತ್ವದಲ್ಲಿ ಹೋರಾಟವನ್ನು ಮಾಡುವುದರ ಮೂಲಕ ಸರ್ಕಾರದಿಂದ ನೇರವಾಗಿ ವೇತನವನ್ನು ಪಡೆಯುವಂತೆ ಮಾಡುವಲ್ಲಿ ಮಂಜುನಾಥ್‌ರವರ ಪಾತ್ರ ಆಧಿಕವಾಗಿದೆ. ಇವರು ಮಾಡಿದ ಹೋರಾಟ, ಶ್ರಮದ ಫಲವಾಗಿ ಇಂದು ಕಾಂಗ್ರೇಸ್ ನೇತೃತ್ವದ ಸರ್ಕಾರ ಅವರನ್ನು ಗೌರವಿಸಿ ಈಗ ಈ ಹುದ್ದೆಯನ್ನು ನೀಡಿದೆ ಮುಂದಿನ ದಿನಮಾನದಲ್ಲಿ ಕಾರ್ಮೀಕರಿಗೆ ಉತ್ತಮವಾದ ಸೌಲಭ್ಯವನ್ನು ಕಲ್ಪಿಸುವಲ್ಲಿ ಮುಂದಾಗಲಿ ಎಂದು ಎಲ್ಲರು ಶುಭ ಕೋರಿದರು.

ಈ ಸಂದರ್ಭದಲ್ಲಿ ಪೌರಾಯುಕ್ತರಾದ ರೇಣುಕಾ, ವ್ಯವಸ್ಥಾಪಕರಾದ ಶ್ರೀಮತಿ ಮಂಜುಳಮ್ಮ, ಕಂದಾಯ ಆಧಿಕಾರಿ ಜಯ್ಯಪ್ಪ, ಆರೋಗ್ಯ ಆಧಿಕಾರಿ ಪುಟ್ಟಸ್ವಾಮಿ, ಸೇರಿದಂತೆ ಸಿಬ್ಬಂದಿಗಳಾದ ಲವ, ರೇಣಿಕಾ, ಭೀಷ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

---

## ಕೊಂಡಾಪುರ ಗ್ರಾಮಸ್ಥರಿಂದ ಲಾರಿಗಳನ್ನ ತಡೆದು ಪ್ರತಿಭಟನೆ

» **ಹೊಸದುರ್ಗ**

ದಿನ ನಿತ್ಯವೂ ಸಹಾ ನೂರಾರು ಲಾರಿಗಳ ಓಡಾಟದಿಂದ ರಸ್ತೆ ಹದೆಗೆಟ್ಟ ಪರಿಣಾಮ ತಾಲೂಕಿನ ಕೊಂಡಾಪುರ ಗ್ರಾಮಸ್ಥರು ಸುಮಾರು 50 ಟಿಪ್ಪರ್ ಲಾರಿಗಳನ್ನು ನೂರಾರು ಮಂದಿ ಗ್ರಾಮಸ್ಥರು ಸೇರಿ ಲಾರಿಗಳನ್ನ ತಡೆದು ಅಡ್ಡ ಹಾಕಿದ ಘಟನೆ ಸೋಮವಾರ ಸಂಜೆ ಜರುಗಿದೆ.

ಘಟನೆಯವಿವರ: ಹೊಸದುರ್ಗ ತಾಲೂಕಿನ ರಂಗಯ್ಯನೂರು ಗ್ರಾಮದ ಸಮೀಪ ಜಲ್ಲಿ ಕ್ರಷರ್ ಕಾರ್ಯ ನಿರ್ವಹಿಸುತಿದ್ದು ಜಲ್ಲಿ ಕ್ರಷರ್ ನಿಂದ ಅತೀ ಹೆಚ್ಚು ತೂಕ ಹೊಂದಿರುವ ಕಲ್ಲುಗಳನ್ನು ತುಂಬಿಕೊಂಡು ಸಾಕಷ್ಟು ಟಿಪ್ಪರ್ ಲಾರಿಗಳು ಮಲ್ಲಪ್ಪನಹಳ್ಳಿ ರಸ್ತೆಯ ಮಾರ್ಗವಾಗಿ ಕಡಿವಾಣಕಟ್ಟೆ ಕೊಂಡಾಪುರ,ಜಂತಿಕೊಳಲು ಈ ಮಾರ್ಗದ ರಸ್ತೆಗಳು ತೀರ್ವ ಹದಗೆಟ್ಟು ವಿಪರೀತ ದುಸ್ಥಿತಿಯಲ್ಲಿವೆ ಈ ದುಸ್ಥಿತಿಗೆ ಈ ಲಾರಿಗಳ ಓಡಾಟವೇ ಮುಖ್ಯ ಕಾರಣವಾಗಿದ್ದು ಈ ಹದಗೆಟ್ಟು ಹೊಗಿರುವ ರಸ್ತೆಯನ್ನ ಕೂಡಲೇ ರಿಪೇರಿ ಮಾಡಿಸಿ, ನಿಮ್ಮ ನಿತ್ಯದ ಓಡಾಟದ ಮಾರ್ಗವನ್ನ ಬಲಾಯಿಸಿಕೊಳ್ಳಿ ಎಂದು ಜಲ್ಲಿ ಕ್ರಷರ್ ಮಾಲಿಕರಿಗೆ ಮತ್ತು ಲಾರಿ ಮಾಲಿಕರ ವಿರುದ್ದ ಪ್ರತಿಭಟನೆ ಮಾಡಿದರು.



---

**ಪ್ರಮುಖ ಸುದ್ದಿ**

### ಗ್ರಾಮದೇವತೆ ಶ್ರೀಚಳ್ಳಕೆರೆಯಮ್ಮನ ಐದು ವರ್ಷಕ್ಕೊಮ್ಮೆ ನಡೆಯುವ ವಿಶೇಷ ಜಾತ್ರೆ

# ಪೂರ್ವಸಿದ್ದತೆಗಳನ್ನು ಪರಿಶೀಲನೆ ನಡೆಸಿದ ರಘುಮೂರ್ತಿ

» **ಚಳ್ಳಕೆರೆ**

ನಾಡಿನ ಲಕ್ಷಾಂತರ ಭಕ್ತರ ಆರಾಧ್ಯ ದೈವ, ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಐದು ವರ್ಷಗಳಿಗೊಮ್ಮೆ ನಡೆಯುವ ವಿಶೇಷ ಜಾತ್ರೆ ಮಾರ್ಚ್ 11ರಿಂದ 16ವರೆಗೂ ನಡೆಯಲಿದ್ದು, ಮಾರ್ಚ್ 14ರಂದು ಸಿಡಿ ಉತ್ಸವ ನಡೆಯಲಿದೆ.

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಜಾತ್ರೆ ಭಕ್ತಿ ಶ್ರದ್ಧೆಯಿಂದ ನಡೆಸಲು ಆಡಳಿತ ಮಂಡಳಿ ಈಗಾಗಲೇ ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ, ಜಾತ್ರೆ ಯಶಸ್ವಿಯಾಗಿ ನಡೆಸಲು ಜಾತ್ರಾ ಆಡಳಿತ ಮಂಡಳಿ ಎರಡ್ಮೂರು ಬಾರಿ ಪೂರ್ವಬಾವಿ ಸಭೆ ಹಮ್ಮಿಕೊಂಡು ಎಲ್ಲಾ ಅಭಿಪ್ರಾಯದಂತೆ ಈ ಬಾರಿಯ ಜಾತ್ರೆ ಅದ್ದೂರಿಯಾಗಿ ನಡೆಯಲಿದೆ.

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಜಾತ್ರೆಯನ್ನು ಇನ್ನೂ ಹೆಚ್ಚು ವೈಶಿಷ್ಟ್ಯಪೂರ್ವವಾಗಿ ಆಚರಿಸುವ ದೃಷ್ಟಿಯಿಂದ ಕ್ಷೇತ್ರದ ಶಾಸಕ, ರಾಜ್ಯ ಸಣ್ಣಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಸೋಮವಾರ ದೇವಸ್ಥಾನಕ್ಕೆಭೇಟಿನೀಡಿಪೂರ್ವಸಿದ್ದತೆಗಳ ಬಗ್ಗೆ ಆಡಳಿತ ಮಂಡಳಿಯೊಂದಿಗೆ ದೇವಸ್ಥಾನದ ಪ್ರಾಂಗಣದಲ್ಲಿ ಸಿದ್ದತೆಗಳನ್ನು ಹಂತ, ಹಂತವಾಗಿ ಪರಿಶೀಲನೆ ನಡೆಸಿ ಕೆಲವೊಂದು ಸಲಹೆ ಸೂಚನೆಗಳನ್ನು ನೀಡಿದರು. ಧರ್ಮದರ್ಶಿ ಗೌಡ್ರರಾಮಣ್ಣ, ಆಡಳಿತ ಮಂಡಳಿ ಸದಸ್ಯರಾದ ಪಿ.ತಿಪ್ಪೇಸ್ವಾಮಿ, ದಳವಾಯಿಮೂರ್ತಿ, ನಾಗರಾಜು, ಪೂಜಾರ್ ಬಸವರಾಜು, ವೀರೇಶ್, ರುದ್ರೇಶ್ ಹಾಗೂ ಆಡಳಿತ ಮಂಡಳಿಯ ನಿರ್ದೇಶಕರೊಂದಿಗೆ ಚರ್ಚೆ ನಡೆಸಿದರು. ಸ್ಥಳದಲ್ಲಿ ಹಾಜರಿದ್ದ ಡಿವೈಎಸ್ಪಿ ರಾಜಣ್ಣರಿಗೆ ಸೂಚನೆ ನೀಡಿದ ಶಾಸಕರು, ಜಾತ್ರೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಹೆಚ್ಚಿನ ಬಂದೋಬಸ್ತ್ ಏರ್ಪಡಿಸುವಂತೆ ಸೂಚನೆ ನೀಡಿದರು.



ಧರ್ಮದರ್ಶಿ ಗೌಡ್ರರಾಮಣ್ಣ, ಆರು ದಿನಗಳ ಕಾಲ ನಡೆಯುವ ಜಾತ್ರೆಯ ಬಗ್ಗೆ ಮಾಹಿತಿ ನೀಡಿ, ಮಾರ್ಚ್ 11ರಂದು ದೊಡ್ಡೇರಿ ಗ್ರಾಮಕ್ಕೆ ತೆರಳಿ ಜಲಧಿ ಗಂಗಾ ಪೂಜೆಯೊಂದಿಗೆ ಕಾರ್ಯಕ್ರಮ ಆರಂಭ, ಮಾರ್ಚ್ 12ರ ಮಂಗಳವಾರಅಮ್ಮನಿಗೆಮಾಂಗಲ್ಯಧಾರಣೆ, ಉಡಿತುಂಬುವ ಕಾರ್ಯಕ್ರಮ, ಮಾರ್ಚ್ 13ರ ಬುಧವಾರ ಹಿಟ್ಟಿನಾರತಿ, ಬೇವಿನ ಸೀರೆ ಉತ್ಸವ, 14ರಂದು ಗುರುವಾರ ಮದ್ಯಾಹ್ನ 12ಗಂಟೆಗೆ ಮುಕ್ತಿಬಾವುಟ ಹರಾಜು, 3.30ಕ್ಕೆ ಸಿಡಿ ಉತ್ಸವ ನಡೆಯಲಿದೆ. 15ರ ಶುಕ್ರವಾರ ಗಾವುಸಭೆ, ಪೋತರಾಜರ ವೀರನಾಟ್ಯ, 16ರ ಶನಿವಾರ ಓಕಳಿ ಮತ್ತು ಪುರಂತರ ವೀರನಾಟ್ಯದೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯವಾಗಲಿದೆ ಎಂದು ತಿಳಿಸಿದರು.

## ಫಾಸ್ಟ್ ನ್ಯೂಸ್

### ನಗರ ದೇವತೆಗಳ ಜಾತ್ರಾ ಪೂರ್ವಭಾವಿ ಸಿದ್ಧತಾ ಸಭೆ

» ದಾವಣಗೆರೆ

ದಾವಣಗೆರೆನಗರದಶ್ರೀದುರ್ಗಾಂಬಿಕಾದೇವಿ ಮತ್ತು ವಿನೋಬನಗರ ಶ್ರೀಚೌಡೇಶ್ವರಿ ದೇವಿ ಜಾತ್ರೆಯ ಪ್ರಯುಕ್ತ ಜಾತ್ರೆಯ ಅವಧಿಯಲ್ಲಿ ಆಗಮಿಸುವ ಭಕ್ತಾಧಿಗಳಿಗೆ ಒದಗಿಸಬೇಕಾದ ಸೌಲಭ್ಯಗಳು ಮತ್ತು ತೆಗೆದುಕೊಳ್ಳಬೇಕಾದ ಮುಂಜಾಗ್ರತ ಸಿದ್ದತೆಗಳ ಬಗ್ಗೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರ ಅಧ್ಯಕ್ಷತೆಯಲ್ಲಿ ಮಾ.5 ರಂದು ಮಧ್ಯಾಹ್ನ 1 ಗಂಟೆಗೆ ಶ್ರೀದುರ್ಗಾಂಬಿಕಾದೇವಿಯ ದೇವಸ್ಥಾನದ ಆವರಣದಲ್ಲಿ ಸಭೆ ಸಭೆ ನಡೆಯಲಿದೆ.

### ವನ್ಯ ಜೀವಿ ಅಂಗಾಂಗಗಳ ಪದಾರ್ಥ, ಟ್ರೋಫಿ ಸೆರೆಂಡರ್ ಮಾಡಿ

» ದಾವಣಗೆರೆ

ಸಾರ್ವಜನಿಕರು ತಮ್ಮಲ್ಲಿರುವ ಅಘೋಷಿತ ವನ್ಯಜೀವಿ, ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳು, ಟ್ರೋಫಿಗಳು ಮತ್ತು ಸಂಸ್ಕರಿಸಿದ ಟ್ರೋಫಿಗಳನ್ನು ಅಧ್ಯರ್ಪಿಸಲು ಸಂಬಂಧಪಟ್ಟ ಅರಣ್ಯಇಲಾಖೆ, ಎಸಿಎಫ್, ಡಿಸಿಎಫ್ ಕಚೇರಿಗೆ ನೀಡಲು 90 ದಿನಗಳ ಕಾಲಾವಕಾಶ ನೀಡಲಾಗಿದೆ, ಅಧ್ಯರ್ಪಿಸಲು ಏ.11 ರಂದು ಕೊನೆಯ ದಿನವಾಗಿದ್ದು, ದಾವಣಗೆರೆ ಜಿಲ್ಲೆಯ ಸಾರ್ವಜನಿಕರು ತಮ್ಮಲ್ಲಿರುವ ವನ್ಯಜೀವಿ ಅಂಗಾಗಳಾದ ಹುಲಿಉಗುರು, ಚಿರತೆಉಗುರು, ಆನೆದಂತ, ಜಿಂಕೆಕೊಂಬು, ವನ್ಯಪ್ರಾಣಿಗಳ ಚರ್ಮ, ವನ್ಯಜೀವಿ ವಸ್ತುಗಳು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಹೊಂದಿದ್ದರೆ. ಅಧ್ಯರ್ಪಿಸಬೇಕು. ಕಚೇರಿಗೆ ಸಲ್ಲಿಸುವ ಮೊದಲು 100 ರೂಪಾಯಿಗಳ ಸ್ಟ್ಯಾಂಪ್ ಪೇಪರ್‌ನಲ್ಲಿ ನೋಟರಿ ಮಾಡಿರಬೇಕು ಮತ್ತು ನೋಟರಿಗೊಂಡ ಅಫಿಡವಿಟನಲ್ಲಿ ಅಧ್ಯರ್ಪಿಸುತ್ತಿರುವ ವನ್ಯಜೀವಿ ಅಂಗಾಂಗ, ಟ್ರೋಫಿಯನ್ನು ಅರ್ಜಿದಾರರು ಪಡೆದ ವಿಧ ಮತ್ತು ವರ್ಷದ ಬಗ್ಗೆ ಸ್ಪಷ್ಟವಾಗಿ ನಮೂದಿಸಿ ದೃಡೀಕರಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991703, ಜಗಳೂರು ಪ್ರಾದೇಶಿಕ ವಲಯ ಕಚೇರಿ,ಮೊ. ನಂ:9481991705, ಹೊನ್ನಾಳಿ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991704, ಹೊಸಕೆರೆ ರಂಗಯ್ಯನದುರ್ಗ ವನ್ಯಜೀವಿ ವಲಯ, ಮೊ. ನಂ:9481991706, ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ,ದಾವಣಗೆರೆ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ದಾವಣಗೆರೆ ಇವರನ್ನು ಸಂಪರ್ಕಿಸಬದು.

### ಕಾರ್ಮಿಕರ ಉಪಧನ ವಿಮಾ ನಿಯಮಗಳ ಕುರಿತು ಕಾರ್ಯಗಾರ

» ದಾವಣಗೆರೆ

ಕಲಬುರಗಿ ಉಪಕಾರ್ಮಿಕ ಆಯುಕ್ತರಿಂದ ಕರ್ನಾಟಕ ಕಡ್ಡಾಯ ಉಪಧನ ವಿಮಾ ನಿಯಮಗಳ ಕಾಯ್ದೆಯನ್ನು ಅನುಷ್ಠಾನಗೊಳಿಸುವ ಬಗ್ಗೆ 1 ದಿನದ ಕಾರ್ಯಗಾರವನ್ನು ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರ ಸಭಾಂಗಣದಲ್ಲಿ ಮಾ.5 ರಂದು ಸಂಜೆ 4.00 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಮಿಕ ಅಧಿಕಾರಿ ಇಬ್ರಾಹಿಂ ತಿಳಿಸಿದ್ದಾರೆ.

### ಸಾಮಾಜಿಕ ಭದ್ರತಾ ಯೋಜನೆ, ಅಂಚೆಯಿಂದ ಸಕಾಲದಲ್ಲಿ ಮಾಸಾಶನ ತಲುಪಿಸಲು ಸೂಚನೆ

» ದಾವಣೆಗೆರೆ

ಸಾಮಾಜಿಕ ಭದ್ರತಾ ಯೋಜನೆಗಳಾದ ಸಂಧ್ಯಾಸುರಕ್ಷಾ, ವೃದ್ದಾಪ್ಯ, ವಿಧವಾ, ಅಂಗವಿಕಲರ ಮಾಸಾಶನ ಸೇರಿದಂತೆ ಇನ್ನಿತರೆ ಮಾಸಾಶನಗಳನ್ನು ಅಂಚೆ ಇಲಾಖೆಯಿಂದ ನಿಗದಿತ ಸಮಯಕ್ಕೆ ತಲುಪಿಸಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಸೂಚನೆ ನೀಡಿದರು. ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಅಂಚೆ ಇಲಾಖೆ ಅಧಿಕಾರಿಗಳು ಹಾಗೂ ಸಾಮಾಜಿಕ ಭದ್ರತಾ ಯೋಜನೆ ಅನುಷ್ಟಾನಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಪ್ರತಿ ತಿಂಗಳು ಸಾಮಾಜಿಕ ಭದ್ರತಾ ಯೋಜನೆ ಮಾಸಾಶನ ಸಕಾಲದಲ್ಲಿ ತಲುಪದ ಕಾರಣ ವಯೋವೃದ್ದರಿಗೆ ಜೀವನ ನಿರ್ವಹಣೆ ಹಾಗೂ ದಿನನಿತ್ಯದ ಖರ್ಚುವೆಚ್ಚಗಳಿಗೆ ಸಮಸ್ಯೆಯಾಗಿದೆ ಎಂದು ಹಲವು ಮಾಸಾಶನ ಫಲಾನುಭವಿಗಳು ದೂರು ನೀಡಿದ್ದರು. ಅಂಚೆ ಇಲಾಖೆಯಿಂದ ಮಾಸಾಶನಗಳು ಸಕಾಲದಲ್ಲಿ ವಿತರಣೆಯಾಗಿದೆಯೇ ಇಲ್ಲವೋ ಎಂಬ ಬಗ್ಗೆ ಪರಿಶೀಲನೆ ನಡೆಸಬೇಕು. ಮಾಸಾಶನದ ಮಾಹಿತಿ ಕೇಳಲು ಬರುವವರಿಗೆ ಅಂಚೆ ಕಚೇರಿಯಲ್ಲಿ ಸೌಜನ್ಯತೆಯಿಂದ ವರ್ತನೆ ಮಾಡುವ ಜೊತೆಗೆ ಅವರ ಖಾತೆಯಲ್ಲಿ ಹಣ ಜಮಾ ಆಗಿರುವ ಬಗ್ಗೆ ನಿಖರ ಮಾಹಿತಿಯನ್ನು ನೀಡಬೇಕು. ಕೆಲವೊಂದು ವೇಳೆ ಅಂಚೆ ಇಲಾಖೆ ನೌಕರರು ವಿತರಣೆಯ ವೇಳೆ ವಿಳಂಬ ಮಾಡುವ ಸಂಭವವಿದ್ದು ಇದನ್ನು ಪೋಸ್ಟ್ ಮಾಸ್ಟರ್ ಪ್ರತಿನಿತ್ಯ ಪರಿಶೀಲನೆ ಮಾಡಿಕೊಳ್ಳಬೇಕೆಂದು ತಿಳಿಸಿ ಮುಂದಿನ ದಿನಗಳಲ್ಲಿ ಸರ್ಕಾರದಿಂದ ಜಮಾ ಮಾಡಿದ್ದರೂ ಮಾಸಾಶನ ತಲುಪದಿದ್ದಲ್ಲಿ ಅಂತಹ ಸಿಬ್ಬಂದಿಯ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

# ಚುನಾವಣಾ ಪ್ರಚಾರ ಸಾಮಗ್ರಿಗಳ ಮುದ್ರಣ ಕಾರ್ಯದ ಮಾಹಿತಿ ನೀಡುವುದು ಕಡ್ಡಾಯ: ಅಪರ ಜಿಲ್ಲಾಧಿಕಾರಿ

» ಚಿತ್ರದುರ್ಗ



ಜಿಲ್ಲೆಯ ಪ್ರತಿಯೊಂದು ಮುದ್ರಣಾಲಯಗಳು ಪ್ರಜಾಪ್ರತಿನಿಧಿ ಕಾಯ್ದೆ 127–ಎ ವಿಧಿಯಡಿ ಚುನಾವಣಾಧಿಕಾರಿಯಿಂದ ಚುನಾವಣಾ ಪ್ರಚಾರ ಸಾಮಾಗ್ರಿಗಳ ಮುದ್ರಣದ ಕುರಿತು ನಿಗದಿತ ಅಪೆಂಡಿಕ್ಸ್–ಎ ನಲ್ಲಿ ಮಾಹಿತಿ ನೀಡುವುದು ಕಡ್ಡಾಯ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಾರ್ವತ್ರಿಕ ಲೋಕಸಭಾ ಚುನಾವಣೆ–2024ರ ಸಂಬಂಧ ಮುದ್ರಣಾಲಯ ಮಾಲೀಕರೊಂದಿಗೆ ಹಾಗೂ ದೂರಸಂಪರ್ಕ ಸಂಸ್ಥೆಯ ಪ್ರತಿನಿಧಿಗಳೊಂದಿಗೆ ಮಾದರಿ ಚುನಾವಣಾ ನೀತಿ ಸಂಹಿತೆ ಅನುಷ್ಠಾನ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಹಾಗೂ ಚುನಾವಣಾ ಲೆಕ್ಕಪತ್ರಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಮುದ್ರಕರ ಸಭೆ ಕರೆದು ಚುನಾವಣಾ ಆರೋಗದ ನಿರ್ದೇಶನ, ಮಾರ್ಗಸೂಚಿ ತಿಳಿಸಲಾಗುತ್ತಿದೆ. 1951ರ ಪ್ರಜಾಪ್ರತಿನಿಧಿ ಕಾಯ್ದೆಯಲ್ಲಿಸ್ಪಷ್ಟವಾಗಿಮುದ್ರಣಾಲಯಗಳ ಕಾರ್ಯವೈಖರಿ ಬಗ್ಗೆ ತಿಳಿಸಲಾಗಿದೆ. ಜಿಲ್ಲೆಯ ಪ್ರತಿಯೊಂದು ಮುದ್ರಣಾಲಗಳು ಪ್ರಜಾಪ್ರತಿನಿಧಿ ಕಾಯ್ದೆಯ 127 ಎ ವಿಧಿಯಡಿ ಚುನಾವಣಾ ಅಧಿಕಾರಿಗೆ ಚುನಾವಣಾ ಪ್ರಚಾರ ಸಾಮಾಗ್ರಿಗಳ ಮುದ್ರಣದ ಕುರಿತು ಅಪೆಂಡಿಕ್ಸ್–ಎ ನಲ್ಲಿ ಡಿಕ್ಲರೇಷನ್ ಮಾಡಿ, ಮಾಹಿತಿಯನ್ನು ನೀಡುವುದು ಕಡ್ಡಾಯವಾಗಿದ್ದು, ಎಲ್ಲ ಮುದ್ರಕರು ತಪ್ಪದೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದರು.

ಪ್ರತಿ ಕರಪತ್ರ, ಭಿತ್ತಿ ಪತ್ರದಲ್ಲಿ ಮುದ್ರಕರ ಹೆಸರು, ಮುದ್ರಣಾಲಯದ ಹೆಸರು ವಿಳಾಸ, ಮುದ್ರಿತ ಪ್ರತಿಗಳ ಸಂಖ್ಯೆ ವಿವರವನ್ನು ನಮೂದಿಸುವುದು ಕಡ್ಡಾಯ. ಮುದ್ರಣಾಲಯದ ಮಾಲೀಕರು ಕಡಿಮೆ ದರ ನಮೂದಿಸುವುದು, ವೆಚ್ಚ ಕಡಿಮೆ ತೋರಿಸುವುದು, ಹೆಚ್ಚು ಪ್ರತಿಗಳನ್ನು ಮುದ್ರಿಸಿ, ಕಡಿಮೆ ಸಂಖ್ಯೆಯನ್ನು ನಮೂದಿಸುವುದು ಅಪರಾಧವಾಗುತ್ತದೆ. ಈಗಾಗಲೇ ಚುನಾವಣಾ ಆಯೋಗಕ್ಕೆ ವಿವಿಧ ಮುದ್ರಣ ಸಾಮಾಗ್ರಿಗಳ ಮುದ್ರಣಕ್ಕೆ ತಗಲುವ ವೆಚ್ಚದ ಪಟ್ಟಿಯನ್ನು ಸಲ್ಲಿಸಲಾಗಿದೆ, ಅಲ್ಲದೆ ನಿಯಮಗಳ ಬಗ್ಗೆ ರಾಜಕೀಯ ಪಕ್ಷಗಳೊಂದಿಗೆ ಸಭೆ ನಡೆಸಿ, ಅರಿವು ಮೂಡಿಸಲಾಗಿದೆ. ಹೀಗಾಗಿ ಯಾವುದೇ ರೀತಿಯ ಅವ್ಯವಹಾರಗಳಿಗೆ ಅವಕಾಶವಿಲ್ಲ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾ ಮಾಸ್ಟರ್ ತರಬೇತುದಾರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ, ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ 1951ರ ಪ್ರಜಾಪ್ರತಿನಿಧಿ ಕಾಯ್ದೆ ಸೆಕ್ಷನ್ 127–ಎ ಪ್ರಕಾರ ರಾಜಕೀಯ ಪಕ್ಷಗಳು, ವ್ಯಕ್ತಿಗಳು ಹಾಗೂ ಅಭ್ಯರ್ಥಿಗೆ ಸಂಬಂಧಪಟ್ಟಂತೆ ಮುದ್ರಣ ಮಾಡುವ ಸಂದರ್ಭದಲ್ಲಿ ಅಗತ್ಯ ಕಾನೂನಾತ್ಮಕ ಪ್ರಕ್ರಿಯೆಗಳನ್ನು ಕಡ್ಡಾಯವಾಗಿ ಪರಿಪಾಲನೆ ಮಾಡಿಕೊಂಡು ಮುದ್ರಿಸಬೇಕು. ಮುದ್ರಣ ಮಾಡುವ ಸಂದರ್ಭದಲ್ಲಿ ಪ್ರಕಾಶಕರು ಯಾವುದೇ ಅಭ್ಯರ್ಥಿ, ರಾಜಕೀಯ ಪಕ್ಷ ಹಾಗೂ ಸಂಸ್ಥೆಗೆ ಸಂಬಂಧಪಟ್ಟಂತೆ ಮುದ್ರಣಾ ಸಾಮಗ್ರಿಯನ್ನು ಮುದ್ರಣ ಮಾಡುವುದಕ್ಕಿಂತ ಮುಂಚಿತವಾಗಿ ಅಪೆಂಡಿಕ್ಸ್–ಎ ಡಿಕ್ಲರೇಷನ್ ಅನ್ನು ಕಡ್ಡಾಯವಾಗಿ ಕೊಡಬೇಕು. ಅನಧಿಕೃತವಾಗಿ ಮುದ್ರಣ ಸಾಮಗ್ರಿ ಮುದ್ರಣ ಮಾಡಲು ಅವಕಾಶವಿಲ್ಲ. ಕಡ್ಡಾಯವಾಗಿ ನೋಂದಾಯಿತ ಪ್ರಕಾಶಕರು, ಮುದ್ರಕರೇ ಮುದ್ರಣ ಕಾರ್ಯ ಮಾಡಬೇಕು ಎಂದರು.

ಮುದ್ರಣ ಸಾಮಗ್ರಿ ಮಾಡಿದ ನಂತರ ಎಷ್ಟು ಪ್ರಮಾಣದ ಮುದ್ರಣ ಪ್ರತಿಗಳ ಸಂಖ್ಯೆ ಹಾಗೂ ಮುದ್ರಣಕ್ಕೆ ತಗಲಿದ ವೆಚ್ಚವನ್ನು ಕಡ್ಡಾಯವಾಗಿ ನಮೂದು ಮಾಡಿ ಸಂಬಂಧಪಟ್ಟ ಚುನಾವಣಾಧಿಕಾರಿಗಳ ಗಮನಕ್ಕೆ ತರಬೇಕು. ಪ್ರತಿಯೊಂದು ವೆಚ್ಚವೂ ಅಭ್ಯರ್ಥಿಯ ಚುನಾವಣಾ ವೆಚ್ಚಕ್ಕೆ ಪರಿಗಣನೆಗೆ ಆಗವುದರಿಂದ ಕಡ್ಡಾಯವಾಗಿ ಮಾಹಿತಿ ನೀಡಬೇಕು. ನಿಯಮ ಉಲ್ಲಂಘಿಸಿದವರ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಅವಕಾಶವಿದೆ. ಯಾವುದೇ ಕಾರಣಕ್ಕೂ ಪ್ರಭಾವ, ಒತ್ತಡಕ್ಕೆ ಮಣಿದು ಅನಧಿಕೃತ ಮುದ್ರಣ ಕಾರ್ಯಕ್ಕೆ ಯಾರೂ ಕೂಡ ಮುಂದಾಗಬಾರದು ಎಂದು ಹೇಳಿದರು.

ನೆಟ್‌ವರ್ಕ್ ಸಂಪರ್ಕ ಬಹಳ ಮುಖ್ಯ: ಮೊಳಕಾಲ್ಮೂರು ತಾಲ್ಲೂಕಿನ ಕೆಲವು ಗ್ರಾಮಗಳು ಹಾಗೂ ಚಳ್ಳಕೆರೆ ತಾಲ್ಲೂಕು ಪರಶುರಾಂಪುರ ಹೋಬಳಿಯ ಕೆಲವು ಗ್ರಾಮಗಳು ಹಾಗೂ ಹೊಸದುರ್ಗ ಹಾಗೂ ಹಿರಿಯೂರು ಭಾಗದ ಗಡಿಗಳಲ್ಲಿ ನೆಟ್‌ವರ್ಕ್ ಸಮಸ್ಯೆ ಇದ್ದು, ಈ ಪ್ರದೇಶಗಳಲ್ಲಿ ನೆಟ್‌ವರ್ಕ್ ಸಂಪರ್ಕಕ್ಕೆ ಅಗತ್ಯ ಕ್ರಮವಹಿಸಬೇಕು, ಇಂತಹ ಕಡೆ ಸಿಗ್ನಲ್‌ಗಾಗಿ ಟವರ್ ಅನ್ನು ಅಳವಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ದೂರಸಂಪರ್ಕ ಪ್ರತಿನಿಧಿಗಳಿಗೆ ಸೂಚನೆ ನೀಡಿದರು.

ನೆಟ್‌ವರ್ಕ್ ಸಮಸ್ಯೆ ಇರುವ ಮತಗಟ್ಟೆವಾರು ಗ್ರಾಮಗಳ ಪಟ್ಟಿಯನ್ನು ದೂರಸಂಪರ್ಕ ಪ್ರತಿನಿಧಿಗಳು ಪಡೆದು, ಮುಂದಿನ ವಾರದೊಳಗೆ ನೆಟ್‌ವರ್ಕ್ ಸಮಸ್ಯೆ ಬಗೆಹರಿಸಬೇಕು ಎಂದು ತಿಳಿಸಿದರು.ಕಮ್ಯೂನಿಕೇಷನ್ ಪ್ಲಾನ್ ಜಿಲ್ಲಾ ನೋಡಲ್ ಅಧಿಕಾರಿ ಹಾಗೂ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್ ಮಾತನಾಡಿ, ಜಿಲ್ಲೆಯಲ್ಲಿ ನೆಟ್‌ವರ್ಕ್ ಸಮಸ್ಯೆ ಇರುವ ಮತಗಟ್ಟೆವಾರು ಗ್ರಾಮಗಳ ವಿವರವನ್ನು ದೂರಸಂಪರ್ಕ ಪ್ರತಿನಿಧಿಗಳಿಗೆ ನೀಡಿ, ನೆಟ್‌ವರ್ಕ್ ಸಮಸ್ಯೆ ಪರಿಶೀಲನೆ ನಡೆಸುವರು ಎಂದು ಸಭೆಗೆ ನೀಡಿದರು.

ಸಭೆಯಲ್ಲಿ ಚುನಾವಣಾ ತರಬೇತಿ ನಿರ್ವಹಣಾ ಕೋಶದ ನೋಡಲ್ ಅಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಕಮ್ಯೂನಿಕೇಷನ್ ಪ್ಲಾನ್ ಜಿಲ್ಲಾ ನೋಡಲ್ ಅಧಿಕಾರಿ ಹಾಗೂ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸವನಗೌಡ ಪಾಟೀಲ್, ಚುನಾವಣಾ ತಹಶೀಲ್ದಾರ್ ಸೇರಿದಂತೆ ಮುದ್ರಾಣಾಲಯ ಮಾಲೀಕರು, ವಿವಿಧ ದೂರ ಸಂಪರ್ಕ ಸಂಸ್ಥೆಯ ಪ್ರತಿನಿಧಿಗಳು ಇದ್ದರು.

# ಸೇವಾ ವಂಚಿತ ಕೂಲಿ ಕಾರ್ಮಿಕರ 20 ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ನೀಡಿಕೆ





» ಚಿತ್ರದುರ್ಗ

ಚಿತ್ರದುರ್ಗ ನಗರದ ದಾವಣಗೆರೆ ರಸ್ತೆಯ ಕ್ರಷರ್ ಬಳಿ ಹೊರ ಜಿಲ್ಲೆಗಳ ವಲಸೆ ಕೂಲಿ ಕಾರ್ಮಿಕ ವರ್ಗದ ಬಿಡಾರಗಳಲ್ಲಿ ವಾಸಿಸುವ ಕುಟುಂಬಗಳ ಸ್ಥಳಕ್ಕೆ ತಾಲ್ಲೂಕು ಆರೋಗ್ಯಾಧಿಕಾರಿಗಳ ಮೇಲ್ವಿಚಾರಣಾ ತಂಡ ಭೇಟಿಟಿ ನೀಡಿ ಸೇವಾ ವಂಚಿತ ಕೂಲಿ ಕಾರ್ಮಿಕರ ಐದು ವರ್ಷದೊಳಗಿನ 20 ಮಕ್ಕಳಿಗೆ ಸೋಮವಾರ ಪಲ್ಸ್ ಪೋಲಿಯೋ ಲಸಿಕೆ ನೀಡಲಾಯಿತು.

ಲಸಿಕಾ ವಂಚಿತ ಮಕ್ಕಳನ್ನು ಒಂದು ಬಿಡಾರದಲ್ಲಿ ಕಲೆ ಹಾಕಿ ಹತ್ತಿರದ ಕ್ಯಾಸಾಪುರ ಮತ್ತು ಮಠದಕುರುಬರಹಟ್ಟಿ ಉಪಕೇಂದ್ರಗಳಿಂದ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನವೀನ್, ವಿರೇಶ್, ಆರೋಗ್ಯ ಸುರಕ್ಷತಾ ಆಧಿಕಾರಿ ಶಿಲ್ಪ, ಮಂಜುಳಾ, ಸಮುದಾಯ ಆರೋಗ್ಯಾಧಿಕಾರಿ ಜಯಲತಾ ಇವರಿಗೆ ಸ್ಥಳಕ್ಕೆ ಲಸಿಕೆ ತರುವಂತೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಸೂಚನೆ ನೀಡಿ, ತಮ್ಮ ಸಮ್ಮುಖದಲ್ಲೇ ಲಸಿಕಾ ವಂಚಿತ ಮಕ್ಕಳಿಗೆ ಲಸಿಕೆ ಕೊಡಿಸಿ ಸಲಹೆ ನೀಡುತ್ತಾ, ಯಾವುದೇ ಮಕ್ಕಳು ಲಸಿಕೆಯಿಂದ ವಂಚಿತರಾಗಬಾರದು. ಇಂತಹಾ ಹೈ ರಿಸ್ಕ್ ಏರಿಯಾಗಳ ಬಗ್ಗೆ ಗಮನ ಹರಿಸಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ವಲಸೆ ಕುಟುಂಬಕ್ಕೆ ಮಾಹಿತಿ ಶಿಕ್ಷಣ ನೀಡಿ, ಲಸಿಕೆಯ ಮಹತ್ವ, ಮಕ್ಕಳ ಆರೋಗ್ಯ ರಕ್ಷಣೆ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಇದ್ದರು. ನಂತರ ತಾಲ್ಲೂಕು ಆರೋಗ್ಯಾಧಿಕಾರಿ ತಂಡ ಕ್ಯಾಸಾಪುರ ವಿಜಾಪುರ ಗ್ರಾಮಗಳ ಮನೆ ಮನೆ ಭೇಟಿ ಮೇಲ್ವಿಚಾರಣೆ ನಡೆಸಿದರು.

## ಮಹಾ ಪಂಚಾಯಿತಿ ಸಮಾವೇಶ ನಾಳೆ



» ಚಿತ್ರದುರ್ಗ

ಕೇಂದ್ರ ಸರ್ಕಾರದ ಸರ್ವಾಧಿಕಾರಿ ಧೋರಣೆ ಖಂಡಿಸಿ ಮಾ. 6 ರಂದು ಬೆಳಿಗ್ಗೆ 10–30 ಕ್ಕೆ ಒನಕೆ ಓಬವ್ವ ವೃತ್ತದಲ್ಲಿ ಮಹಾ ಪಂಚಾಯಿತಿ ಸಮಾವೇಶ ನಡೆಸಲಾಗುವುದೆಂದು ಸಾಮಾಜಿಕ ಚಿಂತಕ ಜೆ.ಯಾದವರೆಡ್ಡಿ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಭಾನುವಾರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹರಿಯಾಣ, ಪಂಜಾಬ್ ರೈತರ ಜೊತೆ 120 ಸಂಘಟನೆಗಳವರು ಸೇರಿಕೊಂಡು ದೆಹಲಿಯಲ್ಲಿ ನ್ಯಾಯಯುತವಾದ ಬೇಡಿಕೆ ಈಡೇರಿಸುವಂತೆ ಚಳುವಳಿ ನಡೆಸುತ್ತಿರುವವರನ್ನು ಕೇಂದ್ರ ಸರ್ಕಾರ ಕ್ರಿಮಿನಲ್‌ಗಳ ತರ ನೋಡುತ್ತಿರುವುದು ಸರಿಯಲ್ಲ. ರೈತ ವಿರೋಧಿ ಮೂರು ಕರಾಳ ಮಸೂದೆಗಳನ್ನು ಹಿಂದಕ್ಕೆ ಪಡೆಯುವಂತೆ ಈ ಹಿಂದೆ ದೆಹಲಿಯಲ್ಲಿ ರೈತರು ಒಂದು ವರ್ಷಗಳ ಕಾಲ ಚಳುವಳಿ ನಡೆಸಿದಾಗ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನೀಡುವುದಾಗಿ ಭರವಸೆ ನೀಡಿದ್ದು, ಇನ್ನು ಈಡೇರಿಲ್ಲ. ಈಗ ರೈತರು ನಡೆಸುತ್ತಿರುವ ಹೋರಾಟಕ್ಕೆ ತಾರ್ತಿಕ ಅಂತ್ಯ ಕಾಣಿಸುವ ಬದಲು ಜಲಪಿರಂಗಿ, ಅಶ್ರಯವಾಯು, ರಬ್ಬರ್ ಗುಂಡು ಹಾರಿಸಿ ರೈತರನ್ನು ಹೀನಾಯವಾಗಿ ನಡೆಸಿಕೊಳ್ಳುತ್ತಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಪ್ರಜಾಪ್ರಭುತ್ವದಲ್ಲಿ ನ್ಯಾಯ ಕೇಳುವ ಹಕ್ಕು ಎಲ್ಲರಿಗೂ ಇದೆ. ನರೇಂದ್ರ ಮೋದಿ ಅಧಿಕಾರಕ್ಕೆ ಬಂದಾಗಿನಿಂದಲೂ ದೇಶದಲ್ಲಿ ಯಾರು ನೆಮ್ಮದಿಯಿಂದ ಇಲ್ಲ. ಬರಗಾಲ ಎದುರಾಗಿದೆ. ಜನ–ಜಾನುವಾರುಗಳಿಗೆ ನೀರಿನ ಕೊರತೆಯಿದೆ. ಯುವ ಪೀಳಿಗೆಗೆ ಉದ್ಯೋಗವಿಲ್ಲ. ಹತ್ತೊಂಬತ್ತು ವಿ.ವಿ.ಗಳಲ್ಲಿ ಖಾಯಂ ಉದ್ಯೋಗಿಗಳಿಲ್ಲ. ಸರ್ಕಾರಿ ಶಾಲೆಗಳು ಮುಚ್ಚುತ್ತಿವೆ. ಪ್ರತಿಷ್ಠಿತ ನೂರು ವಿಶ್ವವಿದ್ಯಾನಿಲಯಗಳಲ್ಲಿ ನಮ್ಮ ದೇಶದಲ್ಲಿ ಒಂದು ಇಲ್ಲದಿರುವುದು ಬೇಸರದ ಸಂಗತಿ ಎಂದು ವಿಷಾಧಿಸಿದರು. ಶಿಕ್ಷಣ, ಆರೋಗ್ಯ ಹಾಳಾಗಿದೆ. ರೈಲ್ವೆ, ಬಿ.ಎಸ್.ಎನ್.ಎಲ್. ಎಲ್ಲವೂ ಖಾಸಗೀಕರಣವಾಗುತ್ತಿದೆ. ಹಸಿವಿನಲ್ಲಿ ಭಾರತ 111 ನೇ ಸ್ಥಾನದಲ್ಲಿದೆ ಎಂದರು.

## ಪ್ರಮುಖ ಸುದ್ದಿ

# ದೇವಸ್ಥಾನ ಕಟ್ಟುವುದು ಎಷ್ಟು ಮುಖ್ಯವೋ ಪಾವಿತ್ರತೆ ಅಷ್ಟೆ ಮುಖ್ಯ

» ಚಿತ್ರದುರ್ಗ



ದೇವಸ್ಥಾನಗಳನ್ನು ಕಟ್ಟುವುದು ಎಷ್ಟು ಮುಖ್ಯವೋ ಪಾವಿತ್ರತೆ ಕಾಪಾಡವುದು ಅಷ್ಟೆ ಮುಖ್ಯ ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಹುಲ್ಲೂರು ಗ್ರಾಮದಲ್ಲಿ ದುರ್ಗಾಂಬಿಕಾದೇವಿಯ ಉತ್ಸವ ಮೂರ್ತಿ ಹಾಗೂ ದೇವಸ್ಥಾನದ ಕಳಸ ಪ್ರತಿಷ್ಠಾಪನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಮಾಜ ಒಂದು ಕುಟುಂಬ ಬದಲಾವಣೆಯಾಗಬೇಕಾದರೆ ಮಹಿಳೆಯರು ಮುಂದೆ ಬರಬೇಕು. ಪುರುಷರು ದುಡಿಯುವ ಹಣ ಹೆಣ್ಣು ಮಕ್ಕಳ ಕೈಗೆ ಬರುವಂತಾಗಬೇಕು. ದೇವಸ್ಥಾನಕ್ಕೆ ಹೋದರೆ ಮನಸ್ಸಿಗೆ ಶಾಂತಿ ಸಮಾಧಾನ ಸಿಗುತ್ತದೆ. ಮಠ

ಮಂದಿರ, ಚರ್ಚ್, ಮಸೀದಿ ದೇಶಕ್ಕೆ ಬೇಕು. ದೇವಸ್ಥಾನ ಜೀರ್ಣೋದ್ದಾರವಾದಂತೆ ಮನುಷ್ಯನ ಜೀವನ ಕೂಡ ಜೀರ್ಣೋದ್ದಾರವಾಗಬೇಕು ಎಂದು ತಿಳಿಸಿದರು.

ದಾರಿದ್ರ್ಯ ನಿವಾರಣೆಯಾಗಬೇಕಾದರೆ ಮಕ್ಕಳಿಗೆ ಶಿಕ್ಷಣ ಬೇಕು. ಎಲ್ಲಿಯವರೆಗೂ ಜೀವನದಲ್ಲಿ ಬದಲಾವಣೆಯಾಗುವುದಿಲ್ಲವೋ ಅಲ್ಲಿಯವರೆಗೂ ಗೌರವ ಸಿಗುವುದಿಲ್ಲ. ಜೀವನದಲ್ಲಿ ಸುಖವಾಗಿರಬೇಕಾದರೆ ಕಷ್ಟ ಪಡಬೇಕು ಎಂದು ಹುಲ್ಲೂರು ಗ್ರಾಮಸ್ಥರಿಗೆ ಹೇಳಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ಅಯೋಧ್ಯೆಯಲ್ಲಿ ರಾಮ ಮಂದಿರ ಅಬುದಾಬಿಯಲ್ಲಿ ಹಿಂದೂ ದೇವಾಲಯವಾಗಿದೆ. ಸರ್ಕಾರದ ಹಣದಿಂದ ದೇವಸ್ಥಾನ ನಿರ್ಮಾಣವಾಗುವುದಕ್ಕಿಂತಲೂ ಮಿಗಿಲಾಗಿ ಭಕ್ತರು ನೀಡುವ ಹಣದಿಂದ ದೇವಾಲಯಗಳಾಗುತ್ತಿರುವುದು ಸಂತಸದ ಸಂಗತಿ. ದೇವಸ್ಥಾನ ಕಟ್ಟುವುದರ ಜೊತೆ ಮಕ್ಕಳಿಗೆ ಶಿಕ್ಷಣ ಕೊಡಿಸಿ. ಸಂವಿಧಾನದಡಿ ಎಲ್ಲರಿಗೂ ಸಮಾನವಾದ ಹಕ್ಕಿದೆ. ಪ್ರಯೋಜನ ಪಡೆದುಕೊಳ್ಳಬೇಕಷ್ಟೆ ಎಂದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡುತ್ತ ಜನಾಂಗದ ಹೆಸರೇಳಿಕೊಂಡು ಬೇಳೆ ಬೇಯಿಸಿಕೊಳ್ಳುವವರು ಜಾಸ್ತಿಯಿದ್ದಾರೆ. ರಾಜಕಾರಣದಲ್ಲಿ ಅಧಿಕಾರದಲ್ಲಿದ್ದಾಗ ಜನಾಂಗಕ್ಕೆ ಕಿಂಚಿತ್ತಾದರೂ ಸಹಾಯವಾಗುವಂತ ಕೆಲಸವಾಗಬೇಕು. ಸಮಾಜದ ಹೆಸರಿನಲ್ಲಿ ಸಿಕ್ಕ ಅಧಿಕಾರವನ್ನು ಸಮಾಜಕ್ಕೆ ಅರ್ಪಿಸಬೇಕು. ಜನಾಂಗದ ಗೌರವ ಕಳೆಯುವ ಕೆಲಸ ಮಾಡಬಾರದು. ಬೇರೆ ಜನಾಂದವರೊಂದಿಗೆ ಪ್ರೀತಿ ಸಹಭಾಳ್ವೆಯಿಂದ ಬದುಕಬೇಕು ಎಂದು ಹೇಳಿದರು.ಒಳ್ಳೆಯ ರೀತಿಯಿಂದ ಏನು ಬೇಕಾದರೂ ಸಾಧನೆ ಮಾಡಬಹುದು. ಪ್ರೀತಿಯಿಂದ ಇದ್ದರೆ ಯಾರು ಯಾರನ್ನು ದ್ವೇಷಿಸುವುದಿಲ್ಲ. ಎಲ್ಲರೊಳಗೊಂದಾಗಿ ಬದುಕುವುದನ್ನು ಕಲಿಯಬೇಕು. ಅದಕ್ಕಾಗಿ ಸರಿಯಾದ ಮಾರ್ಗದಲ್ಲಿ ಸಾಗಬೇಕು ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T